ಸಂಪುಟ : 9 ಸಂಚಿಕೆ 18 ಪುಟ : 4 ಬೆಲೆ : 3.00 ಗುರುವಾರ ಫೆಬ್ರವರಿ 15, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 18 Pages : 4 Price : 3.00 Thursday February 15, 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 15ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 17, 18, 19 ಮೀನದ ಮಾರ್ಕೆಟ್, ಬಳಿಗಾರ ಲೈನ್, ಚೌವ್ಹಾಣದವರ ಲೈನ್, ಮಣ್ಣಮ್ಮನವರ ಲೈನ್, ನಾಲ್ವಾಡದವರ ಲೈನ್, ನಮಾಜಿ ಮೆಂಬರ್ ಲೈನ್. ವಾರ್ಡ್ ನಂ. 28 ದೇವಗಿರಿ ಸರ್ ಲೈನ್, ಸಂತೋಷ ಕಿರಾಣಿ ಲೈನ್, ಅಪಾರ್ಟ್ಮೆಂಟ್ ಲೈನ್, ಕೊರ್ಲಹಳ್ಳಿ ಮಾಸ್ತರ್ ಲೈನ್, ಕಾಗದಗಾರ ಲೈನ್, ಗವಾಯಿಗಳ ಆಶ್ರಮ ಲೈನ್, ಕೃಷ್ಣ ಟ್ಯೂಷನ್ ಲೈನ್, ಸೊಲಾಪಟ್ಟಿ ಲೈನ್.

ವಾರ್ಡ್ ನಂ. 15,16,17 ಶಹಾಪೂರ ಪೇಟೆ, ಮಹೇಂದ್ರಕರ್ ಸರ್ಕಲ್ ಲೈನ್, ಗಾಂಧಿ ಸರ್ಕಲ್ ರಸ್ತೆ, ಡಿಸಿ ಮಿಲ್ ರೋಡ್, ಕೋರ್ಟ್ ರೋಡ್, ಶುದ್ಧ ನೀರಿನ ಘಟಕದ ಲೈನ್, ಬಸವೇಶ್ವರ ಗುಡಿ ಲೈನ್, ಗಣೇಶ್ ಗುಡಿ ಲೈನ್.

ವಾರ್ಡ್ ನಂ. 4 ಮಂಜುನಾಥ್ ನಗರ, ಕಣವಿ ಪ್ಲಾಟ್, 70 ಮನೆ ಪ್ಲಾಟ್, ಟರ್ನಲ್ ಪೇಟೆ, ಮಲ್ಲಪ್ಪನ ಬಡಾವಣೆ, ಶಿವರತ್ನ ಪ್ಯಾಲೇಸ್, ಬಿ ಎಸ್ ಎನ್ ಎಲ್ ಆಫೀಸ್, ಸುಣ್ಣದ ಬಟ್ಟಿ ಲೈನ್, 200 ಮನೆ, ಪಾಂಡವರ ಲೈನ್, ಹುಯಿಲಗೋಳ ರಸ್ತೆ.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಸಂತ ಸೇವಾಲಾಲ್ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಫೆಬ್ರವರಿ 15ರಂದು ಬೆಳಿಗ್ಗೆ 11 ಗಂಟೆಗೆ ಸಂತ ಸೇವಾಲಾಲ್ ಜಯಂತಿಯನ್ನು ಸಾಂಕೇತಿಕವಾಗಿ ಪುಷ್ಪಾರ್ಚನೆಯೊಂದಿಗೆ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗದಗ ಜಿಲ್ಲೆಯ ವ್ಯಾಪ್ತಿಗೆ ಒಳಪಡುವ ಕದಡಿ ಗ್ರಾಮ ಪಂಚಾಯತಿಯಲ್ಲಿ ಗ್ರಾಮೀಣ ಪುರ್ನವಸತಿ ಕಾರ್ಯಕರ್ತರ (ವಿ.ಆರ್.ಡಬ್ಲ್ಯೂ) ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಕದಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ 18 ರಿಂದ 45 ವಯೋಮಿತಿಯ ಎಸ್.ಎಸ್.ಎಲ್.ಸಿ.ಪಾಸಾದ ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿದ, ಅಂಗವಿಕಲರ ಪುನರ್ವಸತಿಗೆ ಸಂಬಂಧಿಸಿದಂತೆ ವಿಶೇಷ ಶಿಕ್ಷಣ, ಆರ್.ಸಿ.ಐ ತರಬೇತಿ, ದಿವ್ಯಾಂಗ ಮಿತ್ರ ತರಬೇತಿ, ಸನ್ನೆ ಭಾಷೆ ತರಬೇತಿ, ದೈಹಿಕ ವ್ಯಾಯಾಮ ತರಬೇತಿ ವಿಶೇಷ ಜ್ಞಾನಗಳನ್ನು ಪಡೆದಿರುವ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ಹಾಗೂ ಭಾಗಶ: ಅಂಧರು, ಭಾಗಶ: ಶ್ರವಣದೋಷವುಳ್ಳವರು ಹಾಗೂ ದೈಹಿಕ ಅಂಗವಿಕಲರು, ನಿರುದ್ಯೋಗಿ ಅರ್ಹ ವಿಕಲಚೇತನ ಯುವಕ-ಯುವತಿಯರಿಗೆ ಇಲಾಖೆಯ ಗೌರವಧನದ ಆಧಾರದ ಮೇಲೆ ತಾತ್ಕಾಲಿಕ ಅವಧಿಯ ಹುದ್ದೆಗೆ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿಕಲಚೇತನರು ಫೆಬ್ರವರಿ 22 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ. ಗದಗ ಜಿಲ್ಲಾಡಳಿತ ಭವನ,ದೂರವಾಣಿ ಸಂಖ್ಯೆ 080372-220419 ಗೆ ಸಂಪರ್ಕಿಸಬಹುದಾಗಿದೆ.

## ಬ್ಯಾಕ್‌ಲಾಗ್ ಹುದ್ದೆಗಳಿಗೆ ಲಿಖಿತ ಪರೀಕ್ಷೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಕಾನ್ಸ್‌ಟೇಬಲ್(ಸಿವಿಲ್) (ಪುರುಷ ಮತ್ತು ಮಹಿಳಾ) & (ತೃತೀಯ ಲಿಂಗ ಪುರುಷ & ಮಹಿಳಾ) ಹಾಗೂ ಸೇವಾ ನಿರತ & ಬ್ಯಾಕ್ ಲಾಗ್-1137 ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಫೆಬ್ರವರಿ 25 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12-30 ಗಂಟೆಯವರೆಗೆ ರಾಜ್ಯಾದ್ಯಂತ ನಡೆಸಲಾಗುವುದು.

ಸದರಿ ಲಿಖಿತ ಪರೀಕ್ಷೆಗೆ ಅರ್ಹರಿರುವ ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್.ಎಂ.ಎಸ್.ಮೂಲಕ ಮಾಹಿತಿಯನ್ನು ನೀಡಲಾಗುವುದು.

ಕರೆಪತ್ರದ ಲಿಂಕನ್ನು ಸಹ ಕಳುಹಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರವನ್ನು ಡೌನ್ಲೋಡ್ ಮಾಡಿಕೊಂಡು ನಿಗದಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಬೇಕೆಂದು ಪೊಲೀಸ್ ಇಲಾಖೆ ಪ್ರಕಟಣೆ ತಿಳಿಸಿದೆ.




### ವಿಧಾನಪರಿಷತ್‌ನಲ್ಲಿ ಮೊಳಗಿದ ಗದಗ-ಬೆಟಗೇರಿ ಕುಡಿಯುವ ನೀರಿನ ಸಮಸ್ಯೆ

# ನೀರಿನ ಸಮಸ್ಯೆ ಇತ್ಯರ್ಥಕ್ಕೆ ಸರ್ಕಾರ ಬದ್ಧ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ವಿಧಾನ ಪರಿಷತ್ ಕಲಾಪದಲ್ಲಿ ಪ್ರತಿಧ್ವನಿಸಿತು. ವಿಪ ಸದಸ್ಯ ಎಸ್.ವಿ. ಸಂಕನೂರ ಹಾಗೂ ನಗರಾಭಿವೃದ್ಧಿ ಸಚಿವ ಬಿ.ಎಸ್. ಸುರೇಶ ಮಧ್ಯೆ ಗಂಭೀರ ಚರ್ಚೆ ನಡೆಯಿತು.

ಗದಗ ಬೆಟಗೇರಿ ಅವಳಿ ನಗರದ 35 ವಾರ್ಡ್‌ಗಳಲ್ಲಿ 15 ದಿನಕ್ಕೊಮ್ಮೆ ಕುಡಿಯುವ ನೀರು ಪೂರೈಕೆ ಆಗುತ್ತಿದೆ. ಆದರೆ ಸಚಿವರು 8 ವಾರ್ಡ್‌ಗಳಿಗೆ 2 ದಿನಕ್ಕೊಮ್ಮೆ, ಉಳಿದ ವಾರ್ಡ್‌ಗಳಿಗೆ 7 ದಿನಕ್ಕೊಮ್ಮೆ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ಸದನಕ್ಕೆ ತಪ್ಪು ಮಾಹಿತಿ ನೀಡುತ್ತಿದ್ದಾರೆ ಎಂದು ಸಂಕನೂರ ವಾಗ್ದಾಳಿ ನಡೆಸಿದರು.

ಅಧಿಕಾರ ವರ್ಗ ತಪ್ಪು ಮಾಹಿತಿ ನೀಡಿ ಸಚಿವರಿಂದ ತಪ್ಪು ಉತ್ತರ ನೀಡುವಂತೆ







ಮಾಡಿದ್ದಾರೆ. ನಗರಸಭೆ ಸಮೀಪದಲ್ಲಿ ನನ್ನ ಮನೆಯಿದ್ದು, ಮನೆ ಮುಂಭಾಗದಲ್ಲಿ ನೀರಿಗಾಗಿ ಜನ ಪ್ರತಿಭಟನೆ ನಡೆಸುತ್ತಿದ್ದಾರೆ. 24/7 ಕುಡಿಯುವ ನೀರಿನ ಯೋಜನೆಯೂ ಪೂರ್ಣಗೊಂಡಿಲ್ಲ. ಗದಗ ಬೆಟಗೇರಿಯ "ಎ" ಪಾಟಿಂಟ್ ವರೆಗೆ ಪೈಪ್ ಲೈನ್ ಅಲ್ಲಲ್ಲಿ ಸೋರಿಕೆಯಾಗುತ್ತಿದೆ. ಯೋಜನೆ ಗುತ್ತಿಗೆ ಪಡೆದ ಗುತ್ತಿಗೆದಾರ ಕಾಮಗಾರಿ ಪೂರ್ಣಗೊಳಿಸಿಲ್ಲ. ಗುತ್ತಿಗೆದಾರ ಯೋಜನೆ ಕೈ ಬಿಟ್ಟು ಹೋಗಿದ್ದಾನೆ. ಈ ಬಗ್ಗೆ ನಿಮ್ಮ ಕ್ರಮ ಏನು ಎಂದು ಸಂಕನೂರ ಸಚಿವರನ್ನು ಪ್ರಶ್ನಿಸಿದರು.

ಸಚಿವ ಭೈರತಿ ಸುರೇಶ ಉತ್ತರಿಸಿ, ವಾರಕ್ಕೊಮ್ಮೆ ಜನರಿಗೆ ನೀರು ಪೂರೈಕೆ ಮಾಡುವುದು ಕೂಡ ಸಮಂಜಸ ಅಲ್ಲ.

▸▸3ನೇ ಪುಟಕ್ಕೆ

**ಚರ್ಚಾ ವಿಷಯ**

ಮುಂದುವರೆದಂತೆ ಮಧ್ಯ ಪ್ರವೇಶಿಸಿದ ಸಭಾಪತಿ ಬಸವರಾಜ ಹೊರಟ್ಟಿ "ಗದಗ ನಗರಕ್ಕೆ ಭೇಟಿ ನೀಡಿ ನೀರಿನ ಕುರಿತು ಸದಸ್ಯರೊದಿಗೆ ಸಭೆ ನಡೆಸಿ, ಸಮಸ್ಯೆಯ ಆಳ ಅರಿತುಕೊಂಡು ಪರಿಹಾರ ಮಾರ್ಗೋಪಾಯ ಕಂಡು ಹಿಡಿಯಿರಿ' ಎಂದು ಸಚಿವರಿಗೆ ಸೂಚನೆ ನೀಡಿದರು.

### ವಿದ್ಯಾದಾನ ಸಮಿತಿ ಮೈದಾನದಲ್ಲಿ ದತ್ತಾ ಗ್ರೂಪ್ ವತಿಯಿಂದ ಅದ್ಧೂರಿ ಕಾರ್ಯಕ್ರಮ

# ಶ್ರೀನಿವಾಸ ಕಲ್ಯಾಣೋತ್ಸವ ಸಂಭ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ದತ್ತಾ ಗ್ರೂಪ್‌ನ 5ನೇ ವಾರ್ಷಿಕೋತ್ಸವದ ಅಂಗವಾಗಿ ಫೆ.15ರಂದು ಸಂಜೆ 4.30ರಿಂದ ಶ್ರೀನಿವಾಸ ಕಲ್ಯಾಣೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ದತ್ತಾ ಗ್ರೂಪ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಕಿರಣ ಭೂಮಾ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ದತ್ತಾ ಗ್ರೂಪ್ ವತಿಯಿಂದ ಈಗಾಗಲೇ ಒಂದು ಬಾರಿ ಶ್ರೀನಿವಾಸ ಕಲ್ಯಾಣೋತ್ಸವ ಆಚರಿಸಲಾಗಿದೆ. ಈಗ ಎರಡನೇ ಬಾರಿಗೆ ಲೋಕ ಕಲ್ಯಾಣಾರ್ಥವಾಗಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ವಿದ್ಯಾದಾನ ಸಮಿತಿ ಮೈದಾನದಲ್ಲಿ ಮೊದಲ ಬಾರಿಗೆ ಜರ್ಮನ್ ಮಾದರಿಯ 120/60 ಅಡಿ ಟೆಂಟ್ ಹಾಕಲಾಗಿದೆ. 10 ಸಾವಿರ ಜನರಿಗೆ ಆಸನ ವ್ಯವಸ್ಥೆ ಕಲ್ಪಿಸಲಾಗಿದೆ.

20 ಸಾವಿರ ಜನ ಕಾರ್ಯಕ್ರಮಕ್ಕೆ ಆಗಮಿಸುವ ನಿರೀಕ್ಷೆಯಿದೆ. ಕಾರ್ಯಕ್ರಮದಲ್ಲಿ ಭಾಗಿಯಾಗುವ ಎಲ್ಲರಿಗೂ ರಾತ್ರಿ 8 ಗಂಟೆಗೆ ಮಹಾಪ್ರಸಾದ ವ್ಯವಸ್ಥೆ ಸಹ ಮಾಡಲಾಗಿದೆ ಎಂದು ತಿಳಿಸಿದರು.

ಮೈಸೂರಿನ ರಾಘವೇಂದ್ರ ತಂಡದ 50 ಬಾಣಸಿಗರು ಪ್ರಸಾದಕ್ಕೆ ಸಿದ್ಧತೆ ನಡೆಸಿದ್ದಾರೆ. 400 ಜನ ಸ್ವಯಂಸೇವಕರು ಕೈ ಜೋಡಿಸಿದ್ದಾರೆ. ಶ್ರೀವಾರಿ ಫೌಂಡೇಶನ್‌ನ ವೆಂಕಟಮೂರ್ತಿ ತಂಡದವರು 646ನೇ ಶ್ರೀನಿವಾಸ ಕಲ್ಯಾಣೋತ್ಸವ ನಡೆಸಿಕೊಡಲಿದ್ದಾರೆ. ಖ್ಯಾತ ಹರಿದಾಸ ಸಂಗೀತ ರತ್ನ ಪುತ್ತೂರು ನರಸಿಂಹ ನಾಯಕ ಅವರಿಂದ ದಾಸವಾಣಿ ಮತ್ತು ಸಂಗೀತ ಕಾರ್ಯಕ್ರಮ ನೆರವೇರಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕಿರಣಕುಮಾರ ಬೂಮಾ, ಎಸ್.ಎಚ್. ಶಿವನಗೌಡ್ರ, ಸದಾಶಿವ ಚನ್ನಪ್ಪನವರ, ನಾರಾಯಣ ಕುಡತರಕರ, ರಾಘವೇಂದ್ರ ಬಾರಡ, ಜಹೀರ ತಾಡಪತ್ರಿ ಉಪಸ್ಥಿತರಿದ್ದರು.



ತೋಂಟದ ಸಿದ್ಧರಾಮ ಸ್ವಾಮೀಜಿ, ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು, ಮಣಕವಾಡದ ಅಭಿನವ ಮೃತ್ಯುಂಜಯ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮಾಜಿ ಸಚಿವ ಬಿ. ಶ್ರೀರಾಮುಲು ಶ್ರೀನಿವಾಸ ಕಲ್ಯಾಣೋತ್ಸವಕ್ಕೆ ಚಾಲನೆ ನೀಡುವರು. ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ, ಡಾ. ಪ್ರಭಾಕರ ಕೋರೆ, ಉದ್ಯಮಿ ವಿಜಯ ಸಂಕೇಶ್ವರ, ವಿಧಾನ ಪರಿಷತ್ ಮಾಜಿ ಮುಖ್ಯ ಸಚೇತಕ ಮಹಾಂತೇಶ ಕವಟಗಿಮಠ ಹಾಗೂ ಜಿಲ್ಲೆಯ ಜನಪ್ರತಿನಿಧಿಗಳು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಕಿರಣ ಭೂಮಾ ಮಾಹಿತಿ ನೀಡಿದರು.



## ಸಾಕ್ಷಿ ಸುಭಾಷಿತ

ಅಧಿಕಾರದಲ್ಲಿರುವಂಥ ವ್ಯಕ್ತಿಯು ಹೊಗಳುಭಟರನ್ನು ದೂರವಿಟ್ಟು ಟೀಕಿಸುವವರನ್ನು ಸ್ವಾಗತಿಸಬೇಕು

–ಬುದ್ಧಿಮಾತು

## ಸಂಪಾದಕೀಯ

# ವಾಯುಮಾಲಿನ್ಯ ನಿಯಂತ್ರಣ ನಿಯಂತ್ರಣಕ್ಕೆ ಜನಾಂದೋಲನ

ದೇಶದಲ್ಲಿ ವಾಯುಮಾಲಿನ್ಯ ಅತ್ಯಂತ ದೊಡ್ಡ ಸಮಸ್ಯೆಯಾಗಿ ಪರಿವರ್ತನೆ ಆಗುತ್ತಿದೆ. ಅದರಲ್ಲೂ ಉತ್ತರ ಭಾರತದಲ್ಲಿ ವಾಯುಮಾಲಿನ್ಯ ವಿಪರೀತವಾಗಿದೆ. ವಾಯು ಮಾಲಿನ್ಯದ ಪರಿಣಾಮ ಎಷ್ಟು ತೀವ್ರವಾಗಿದೆ ಎಂದರೆ, ಭವಿಷ್ಯದಲ್ಲಿ ಮನುಷ್ಯರ ಜೀವಿತಾವಧಿ ಕಡಿಮೆ ಆಗಲಿದೆ ಎಂದು ಅಧ್ಯಯನ ಒಂದು ವರದಿ ಮಾಡಿದೆ.

ವಾಯುಮಾಲಿನ್ಯ ನಿಯಂತ್ರಣಕ್ಕೆ ಮುಂದಾಗದಿದ್ದರೆ ಉತ್ತರ ಭಾರತದ ಸುಮಾರು 51 ಕೋಟಿ ಜನರ ಜೀವಿತಾವಧಿ ಸರಾಸರಿ 7.6 ವರ್ಷಗಳಷ್ಟು ಕಳೆದುಕೊಳ್ಳಲಿದ್ದಾರೆ ಎಂದು ಚಿಕಾಗೋ ವಿಶ್ವವಿದ್ಯಾನಿಲಯದ ಎನರ್ಜಿ ಪಾಲಿಸಿ ಇನ್ಸ್ಟಿಟ್ಯೂಟ್ ವರದಿ ಮಾಡಿದೆ.

ಇದು ಕೇವಲ ಉತ್ತರ ಭಾರತದ ಸಮಸ್ಯೆ ಮಾತ್ರವಲ್ಲ. ಭಾರತದ ವಾಯುಮಾಲಿನ್ಯ ಇಡೀ ಜಗತ್ತಿನ ಮೇಲೆ ಪರಿಣಾಮ ಬೀರುತ್ತದೆ. 2013 ರಿಂದ ಈಗಿನವರೆಗೆ ಜಗತ್ತಿನ ಶೇಕಡ 44 ರಷ್ಟು ವಾಯುಮಾಲಿನ್ಯ ಭಾರತದಿಂದಲೇ ಆಗಿದೆ ಎನ್ನುವುದು ಆಘಾತಕಾರಿ ಅಂಶ.

ಬಾಂಗ್ಲಾದೇಶದ ನಂತರ ಭಾರತ ಜಗತ್ತಿನ ಎರಡನೇ ಅತಿ ದೊಡ್ಡ ವಾಯುಮಾಲಿನ್ಯ ಉಂಟು ಮಾಡುವ ದೇಶವಾಗಿದೆ. ದೇಶದ ರಾಜಧಾನಿ ದೆಹಲಿ, ಜಗತ್ತಿನ ವಾಯುಮಾಲಿನ್ಯದ ರಾಜಧಾನಿ ಎನ್ನುವಷ್ಟರ ಮಟ್ಟಿಗೆ ಕಲುಷಿತವಾಗಿದೆ.

ವಾಯು ಮಾಲಿನ್ಯ ಕೇವಲ ಮನುಷ್ಯರ ಮೇಲೆ ಅಷ್ಟೇ ಅಲ್ಲದೆ ಎಲ್ಲ ಜೀವರಾಶಿಗಳ ಮೇಲು ಪರಿಣಾಮ ಬೀರುತ್ತದೆ. ಹೀಗಾಗಿ ಪರಿಸರ ರಕ್ಷಣೆ ನಮ್ಮ ಆದ್ಯ ಕರ್ತವ್ಯವಾಗಬೇಕು. ವಾಯುಮಾಲಿನ್ಯ ನಿಯಂತ್ರಣಕ್ಕೆ ಅನೇಕ ಕಾನೂನುಗಳಿದ್ದರೂ ಅವು ಅನುಷ್ಠಾನಕ್ಕೆ ಬರುತ್ತಿಲ್ಲ. ಆದರೆ ಇಂದಿನ ಪರಿಸ್ಥಿತಿಯನ್ನು ಗಮನಿಸಿದರೆ ವಾಯುಮಾಲಿನ್ಯ ನಿಯಂತ್ರಣದ ಕಾನೂನುಗಳು ಕಟ್ಟುನಿಟ್ಟಾಗಿ ಜಾರಿಯಾಗಬೇಕು. ಕೇವಲ ಕಾನೂನಿನಿಂದ ಮಾತ್ರವಲ್ಲದೆ, ಸ್ವಯಂ ಪ್ರೇರಿತರಾಗಿ ವಾಯುಮಾಲಿನ್ಯ ನಿಯಂತ್ರಣಕ್ಕೆ ಮುಂದಾಗಬೇಕು. ಇದ್ಯಾವುದೂ ಆಗದಿದ್ದರೆ ಕೆಲವೇ ವರ್ಷಗಳಲ್ಲಿ ಜನಾಂದೋಲನ ನಡೆಯಬೇಕಾದ ಪರಿಸ್ಥಿತಿ ಎದುರಾಗಬಹುದು.

### ಫೆಬ್ರವರಿ 15, ಸೇವಾಲಾಲರ 285ನೇ ಜಯಂತಿಯ ನಿಮಿತ್ತ ವಿಶೇಷ ಲೇಖನ


# ಬಂಜಾರರ ಕುಲಗುರು ಶ್ರೀ ಸೇವಾಲಾಲರು

ಬಂಜಾರ ಜನಾಂಗವು ತಮ್ಮದೇ ಆದ ವೇಷ–ಭೂಷಣ, ಉಡುಗೆ–ತೊಡುಗೆ, ಸಂಸ್ಕೃತಿ ಮತ್ತು ಧಾರ್ಮಿಕ ಸಂಪ್ರದಾಯ, ಪದ್ಧತಿಗಳನ್ನು ಪಾಲಿಸುವ ಮೂಲಕ ಆಚಾರ–ವಿಚಾರಗಳಿಂದ ಶ್ರೇಷ್ಠತೆಯನ್ನು ಕಾಣುತ್ತಾರೆ. ಮೊದಲ ಬಾರಿಗೆ ಬಂಜಾರ ಸಮುದಾಯದವರಿಗೆ ಧರ್ಮದ ಹಾಗೂ ಭಕ್ತಿಯ ಮಾರ್ಗವನ್ನು ತೋರಿಸಿದ, ಭಕ್ತಿ ಚಳುವಳಿಯ ಹರಿಕಾರರಾಗಿ, ಬ್ರಹ್ಮಚಾರಿಯಾಗಿ, ಸಮಾಜದ ಏಳಿಗೆಗಾಗಿ ಶ್ರಮಿಸಿದ, ಮಹಾ ಚೈತನ್ಯ ಮತ್ತು ಬೇಡಿದ ವರವನ್ನು ಕೊಡುವ ಪವಾಡ ಪುರುಷರಾಗಿ ಸಮುದಾಯಕ್ಕೆ ಧಾರ್ಮಿಕ ಪರಂಪರೆಯ ಇತಿಹಾಸವನ್ನು ಸೃಷ್ಟಿಸಿದ ಮಹಾನ್ ಸಂತ ಶ್ರೀ ಸೇವಾಲಾಲ ಮಹಾರಾಜರನ್ನು ಬಂಜಾರಗರು ತಮ್ಮ ಕುಲಗುರು, ಧರ್ಮಗುರು, ಆರಾಧ್ಯ ದೇವರು ಎಂದು ಆರಾಧಿಸುತ್ತಾರೆ.

ಫೆಬ್ರವರಿ 15ರ ಈ ದಿನ ಸೇವಾಲಾಲರ 285ನೇ ಜಯಂತಿಯನ್ನು ದೇಶ–ವಿದೇಶಗಳಲ್ಲಿನ ಸಮಸ್ತ ಬಂಜಾರ ಸಮುದಾಯ ಅಷ್ಟೇ ಅಲ್ಲದೆ ಸರ್ವಧರ್ಮಗಳ ಜನಾಂಗದವರಿಂದ ಆಚರಿಸಲಾಗುತ್ತಿದೆ. ಹಿಂದೂ ಧರ್ಮದ ಏಳಿಗೆ ಹಾಗೂ ಧರ್ಮ ಜಾಗೃತಿಗಾಗಿ ಶ್ರಮಿಸಿದ ಅನೇಕ ಮಹಾನ್ ಸಂತರ ಹಾಗೆ ಹಿಂದೂ ಧರ್ಮದ ಉನ್ನತಿಗಾಗಿ ಸೇವಾಲಾಲ ಮಹಾರಾಜರು ತಮ್ಮದೇ ಆದ ಕೊಡುಗೆ ನೀಡಿದ್ದಾರೆ.

ಬಂಜಾರಗರು ಈ ದೈವ ಪುರುಷನನ್ನು ಮೋತಿವಾಳೊ, ಝೂರಿ ಮೋತಿವಾಳೊ, ದೊಳೊ ಘೋಡೆವಾಳೊ, ಗಾದಿವಾಳೊ, ದೊಳ ಪಗಡಿವಾಳೊ, ಆಯಿವಾಳೊ, ಲಗ್ಗಿವಾಳೊ, ಸೇವಾ ಭಾಯಾ, ಸೇವಾ ಬಾಪು ಎಂದು ವಿವಿಧ ಹೆಸರುಗಳಿಂದ ಆರಾಧಿಸುತ್ತಾರೆ. ಸರ್ವಜನಾಂಗಕ್ಕೆ ಶಾಂತಿ, ಸಹನೆ, ಪ್ರಾಮಾಣಿಕತೆ ಮತ್ತು ಸ್ವಾಭಿಮಾನದ ಜೀವನ ನಡೆಸಲು, ಮಹಾರಾಜರು ಬಿಳಿಯ ಬಣ್ಣದ ಝುಂಡಾ (ಧೋಳ ಲಗ್ಗಿ/ಕಾಟಿ) ಕೈಯಲ್ಲಿ ಹಿಡಿದುಕೊಂಡು, ವಿಶ್ವ ಜನಾಂಗಕ್ಕೆ ಶಾಂತಿಯ ಸಂದೇಶವನ್ನು ಮತ್ತು ಅಂಹಿಸಾ ಮಾರ್ಗ ಅನುಸರಿಸಲು ಧಾರ್ಮಿಕ ಉಪದೇಶವನ್ನು ನೀಡಿದ್ದರಿಂದ ಇವರನ್ನು 'ಧೋಳ ಲಗ್ಗಿವಾಳೊ', ಝುಂಡಾವಾಳೊ ಎಂದು ಕರೆಯುತ್ತಾರೆ.

ಸೇವಾಲಾರರು ತಮ್ಮ ಬಾಲ್ಯದ ದಿನಗಳಲ್ಲಿ ಸುರಗೊಂಡನಕೊಪ್ಪದ ಸುತ್ತಮುತ್ತಲಿನ ಪ್ರದೇಶಗಳಿಗೆ ಗೋವುಗಳನ್ನು ಮೇಯಿಸಲು ಹೋಗುತ್ತಿದ್ದಾಗ ಗೆಳೆಯರೊಂದಿಗೆ ಆಟವಾಡುತ್ತ ಗೋವುಗಳನ್ನು ಮೆಯಿಸುತ್ತಾ



ಗೋಪಾಲನ ಹಾಗೆ ಅನೇಕ ಪವಾಡಗಳನ್ನು ಮಾಡಿದ್ದರ ಕುರಿತು ಬಂಜಾರ ಜಾನಪದ ಸಾಹಿತ್ಯ, ಭಜನೆ, ಕತೆ–ಪುರಾಣ ಹಾಗೂ ಸಂಶೋಧಕರ ಬರವಣಿಗೆಗಳಿಂದ ತಿಳಿಯುತ್ತದೆ. ಮರಿಯಮ್ಮನ ಸೇವೆಗೆ ತೊಡಗಿಸಿಕೊಂಡು ಸೇವಾಲಾಲರು ಮಹಾನ್ ಸಾಧಕರಾಗಿ ಮೆರೆಯುತ್ತಾರೆ.

ಮಹಾರಾಜರು ಪ್ರಕೃತಿಯ ಮಡಿಲಲ್ಲಿ ದೊರೆಯುವ ಆಯುರ್ವೇದದ ಗಿಡ ಮೂಲಿಕೆಗಳಿಂದ ಭಕ್ತರ ಹಲವು ರೋಗ ರುಜಿನಗಳನ್ನು ವಾಸಿಮಾಡುವದರ ಮೂಲಕ ಅನೇಕರ ಜೀವವನ್ನು ರಕ್ಷಿಸಿದ ಆಯುರ್ವೇದಿಕ್ ಪಂಡಿತರಾಗಿರುತ್ತಾರೆ. 18ನೇ ಶತಮಾನದಲ್ಲಿ ಮಹಾರಾಜರ ದೈವಿಕ ಶಕ್ತಿಯನ್ನು ತಿಳಿದು ಹೈದರಾಬಾದಿನ ನಿಜಾಮನು ಸೇವಾಲಾಲರನ್ನು ಅರಮನೆಗೆ ಕರೆದು ಪಾದಪೂಜೆಯನ್ನು ಮಾಡುತ್ತಾರೆ, ಹೈದರಾಬಾದ ನಗರದ ಕೇಂದ್ರಸ್ಥಾನದಲ್ಲಿ ಅವರ ತಂಡಕ್ಕಾಗಿ ನೆಲೆಯೂರಲು ಒಂದಿಷ್ಟು ಜಾಗವನ್ನು ಅರ್ಪಿಸುತ್ತಾರೆ. ಆ ಪ್ರದೇಶವನ್ನು ಇಂದು ಬಂಜಾರ ಹಿಲ್ಸ್ ಎಂದು ಕರೆಯಲಾಗುತ್ತದೆ.

ಹೀಗೆ ಸೇವಾಲಾಲರು ಲೋಕಕಲ್ಯಾಣಕ್ಕಾಗಿ ಅನೇಕ ಹಿತೋಪದೇಶಗಳನ್ನು ಬೋಧಿಸುತ್ತಾ ಧರ್ಮಸೇವೆಯಿಂದ ಪ್ರಖ್ಯಾತಿ ಪಡೆದು ವಿಶ್ವ ಬಂಜಾರರ ನಡೆದಾಡುವ ದೇವರಾಗಿ, ಪವಾಡ ಪುರುಷರಾಗಿ, ಕಾಯಕ ಯೋಗಿಯಾಗಿ ಮಹಾರಾಷ್ಟ್ರ ರಾಜ್ಯದ ಪೌರಾಗಡನಲ್ಲಿ ಧ್ಯಾನದ ಮೂಲಕ ಪರಮಾತ್ಮನನ್ನು ಕಂಡು ಅಮರರಾಗಿ ಇಹ್ಯ ಲೋಕವನ್ನು ತ್ಯಜಿಸಿ ಭಗವಂತನಲ್ಲಿ ಲೀನರಾದರು.

ಕರ್ನಾಟಕ ಸರ್ಕಾರ ಸೇವಾಲಾಲರ ಜನ್ಮ ದಿನಾಚರಣೆಯ ಅಂಗವಾಗಿ ಪ್ರತಿ ವರ್ಷ ಫೆಬ್ರವರಿ 15ರಂದು ಮಹಾರಾಜರ ಜಯಂತಿಯನ್ನು ಸಕಲ ಕಲಾ ಗೌರವಗಳೊಂದಿಗೆ ಸರ್ಕಾರಿ ಜಯಂತಿಯನ್ನಾಗಿ ಆಚರಿಸುತ್ತದೆ. ಜಯಂತ್ಯುತ್ಸವದ ನಿಮಿತ್ಯ ಮಹಾರಾಜರ ಜನ್ಮ ಸ್ಥಳ ಕರ್ನಾಟಕದ ಸುರಗೊಂಡನಕೊಪ್ಪದಲ್ಲಿ ಹಾಗೂ ಮಹಾರಾಷ್ಟ್ರದ ಐಕ್ಯಸ್ಥಳ ಪೌರಾಗಡದಲ್ಲಿ ವಿಶೇಷವಾಗಿ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಮಹಾರಾಜರ ಜಯಂತಿಯನ್ನು ಬಂಜಾರ ಸಮುದಾಯದ ತಾಂಡಾಗಳಲ್ಲಿ, ಪ್ರತಿಯೊಬ್ಬರ ಮನೆ ಮನೆಗಳಲ್ಲಿ, ಸರ್ಕಾರಿ–ಅರೆ ಸರ್ಕಾರಿ ಕಚೇರಿಗಳಲ್ಲಿ, ಶಾಲಾ–ಕಾಲೇಜುಗಳಲ್ಲಿ ಭೋಗ ಹಚ್ಚುವ ಮೂಲಕ ವಿಶೇಷ ಪುಜೆಗಳಿಂದ ಆಚರಿಸಲಾಗುತ್ತದೆ.

ಶ್ರೀ ಸೇವಾಲಾಲರ ತತ್ವಗಳು, ಉಪದೇಶಗಳು, ಅವರು ಸಮಾಜಕ್ಕೆ ನೀಡಿರುವ ಅಪಾರವಾದ ಕೊಡುಗೆಗಳು ಮತ್ತು ಧಾರ್ಮಿಕ, ಸಾಂಪ್ರದಾಯಿಕ ಕಾರ್ಯಗಳು ಜನಸಾಮಾನ್ಯರಿಗೆ ಹಾಗೂ ಭಕ್ತರಿಗೆ ತಲುಪಲಿ. ಮಹಾನ್ ಸಂತರು ಹಾಕಿಕೊಟ್ಟ ಮಾರ್ಗ ಮತ್ತು ಧರ್ಮದ ಕಾಯಕದಲ್ಲಿ ಸರ್ವರೂ ಸಾಗಲಿ.

**– ಪಾಂಡು ಆಲಪ್ಪ ಚವ್ಹಾಣ.**
**ಉಪನ್ಯಾಸಕರು, ಬೆಳಧಡಿ–ಗದಗ.**

# ರಮೇಶ ಬಡಿಗೇರರಿಗೆ ಡಾಕ್ಟರೇಟ್

**■ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥರಾಗಿರುವ ರಮೇಶ ಬಡಿಗೇರ ಹುಬ್ಬಳ್ಳಿಯ ಕೆಎಲ್ಇಐಟಿ ಸಂಶೋಧನಾ ಕೇಂದ್ರದಲ್ಲಿ ಡಾ. ರಾಜೇಶ ಯಕ್ಕುಂಡಿಮಠ ಅವರ ಮಾರ್ಗದರ್ಶನದಲ್ಲಿ 'ರಿಕಗ್ನಿಷನ್ ಆ್ಯಂಡ್ ಕ್ಲಾಸಿಫಿಕೇಶನ್ ಆಫ್ ಸೌಥ್ ಇಂಡಿಯನ್ ಸೈನ್ ಲಾಂಗ್ವೇಜಸ್ ಫಾರ್ ಸ್ಟಿಲ್ ಇಮೆಜಸ್ ಆ್ಯಂಡ್ ವಿಡಿಯೊ' ಎನ್ನುವ ಶೀರ್ಷಿಕೆಯಡಿ ಕಂಪ್ಯೂಟರ್ ಸೈನ್ಸ್ ವಿಷಯದಲ್ಲಿ ಮಹಾಪ್ರಬಂಧವನ್ನು ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಕ್ಕೆ ಸಲ್ಲಿಸಿ ಡಾ–ಕ್ಟರೇಟ್ ಪಡೆದುಕೊಂಡಿದ್ದಾರೆ.

ಅವರ ಈ ಸಾಧನೆಗಾಗಿ ಮಹಾವಿದ್ಯಾಲಯದ ಆಡಳಿತ ಮಂಡಳಿ, ಪ್ರಾಂಶುಪಾಲ ಡಾ. ಎಂ.ಎಂ. ಅವಟಿ, ಎಲ್ಲ ವಿಭಾಗದ ಮುಖ್ಯಸ್ಥರು ಮತ್ತು ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

### ವಿದ್ಯಾರ್ಥಿಗಳಿಗಾಗಿ ಒಂದು ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮ

# ಶಿಕ್ಷಕರ ಮೇಲೆ ಗುರುತರ ಜವಾಬ್ದಾರಿಯಿದೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮಾಜದಲ್ಲಿನ ಎಲ್ಲ ಪರಿಹಾರಗಳಿಗೆ ವರ್ಗಕೋಣೆಯೇ ಸೂಕ್ತ ಪರಿಹಾರವಾಗಿದ್ದು, ವರ್ಗ ಕೋಣೆಯಲ್ಲಿ ಈ ಜಗತ್ತಿನ ಭವಿಷ್ಯ ಬರೆಯಲ್ಪಡುತ್ತದೆ. ಆದ್ದರಿಂದ ವರ್ಗ ಕೋಣೆಗಳು ಎಂದಿಗೂ ಸಶಕ್ತವಾಗಿರಬೇಕು ಎಂದು ಗದಗ ಜಿಲ್ಲಾ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಹೇಳಿದರು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕರ ಪ್ರೌಢಶಾಲೆಯಲ್ಲಿಂದು ಎಸ್.ಎ.ವಿ.ವಿ.ಪಿ ಸಮಿತಿ ಹಾಗೂ 1972–73ನೆ ಸಾಲಿನ ವಿದ್ಯಾರ್ಥಿಗಳು ಈ ಸಾರೆಯ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಒಂದು ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದ ಗುರಿಯನ್ನು ಮುಟ್ಟಲು ಮತ್ತು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಲು ಪ್ರತಿ ವ್ಯಕ್ತಿಗೆ ವರ್ಗಕೋಣೆ ಸಹಾಯಕವಾಗಿದೆ. ಜಗತ್ತಿನಲ್ಲಿ ಶಿಕ್ಷಕರಿಗಿಂತ ದೊಡ್ಡವರು ಯಾರೂ ಇಲ್ಲ. ಹೀಗಾಗಿ ಶಿಕ್ಷಕರ ಮೇಲೆ ಗುರುತರವಾದ ಜವಾಬ್ದಾರಿ ಇದೆ ಎಂದ ಅವರು, ಒಂದು ಮಗು ಪರಿಪೂರ್ಣವಾದ ಶಿಕ್ಷಣವನ್ನು ಪಡೆದರೆ ಅದರಿಂದ ಸ್ವತಃ ಅವನಿಗೆ, ಅವನ ಮನೆಗೆ, ಊರಿಗೆ, ರಾಜ್ಯಕ್ಕೆ, ದೇಶಕ್ಕೆ ಕೊಡುಗೆಯನ್ನು



ನೀಡಿದಂತಾಗುತ್ತದೆ. ಇಂತಹ ಗುಣಮಟ್ಟದ ಶಿಕ್ಷಣವನ್ನು ನೀಡುವಲ್ಲಿ ಶಿಕ್ಷಕರು ಮುತುವರ್ಜಿ ವಹಿಸಬೇಕು. ನನ್ನನ್ನು ನಾನು ಅರಿತುಕೊಳ್ಳುವುದೇ ಶಿಕ್ಷಣದ ನಿಜವಾದ ಉದ್ದೇಶವಾಗಿದೆ. ಈ ಸಂದೇಶವನ್ನು ಸಫಲಪಡಿಸುವಲ್ಲಿ ಇಂದಿನ ಈ ವಿಶೇಷ ಉಪನ್ಯಾಸ ಮಕ್ಕಳಿಗೆ ಉಪಯುಕ್ತವಾಗಲಿ, ಶೃಂಗೇರಿಯಿಂದ ಬಂದಿರುವ ಎನ್.ಸಿ. ಪಾಂಡುರಂಗಿಯವರ ಮಾರ್ಗದರ್ಶನ ಜಿಲ್ಲೆಯ ಫಲಿತಾಂಶವನ್ನು ಹೆಚ್ಚಿಸುವಲ್ಲಿ ಸಹಾಯಕವಾಗಲಿ ಎಂದು ಹಾರೈಸಿದರು.

ವಿಶೇಷ ಉಪನ್ಯಾಸ ನೀಡಿದ ಎನ್.ಸಿ. ಪಾಂಡುರಂಗಿ, ನಿಮ್ಮಲ್ಲಿ ಪ್ರತಿಭೆಯಿದೆ. ನಿಮ್ಮಲ್ಲಿನ ಈ ಪ್ರತಿಭೆಯನ್ನು ಹೊರಹಾಕುವ ಕೆಲಸವನ್ನಷ್ಟೆ ಮಾಡಲು ನಾನಿಲ್ಲಿಗೆ ಬಂದಿದ್ದೇನೆ. ನಿಮ್ಮ ಸಾಮರ್ಥ್ಯದ ಬಗ್ಗೆ ನಿಮ್ಮಲ್ಲಿ ನಿಮಗೆ ವಿಶ್ವಾಸವಿರಲಿ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಾರೂ ಪ್ರತಿಭೆಯಲ್ಲಿ ಕಡಿಮೆಯಿಲ್ಲ. ಈ ಹಿಂಜಿಕೆಯನ್ನು ಬಿಟ್ಟು ನೀವು ನಿಮ್ಮ ಅಧ್ಯಯನದ ಕಡೆಗೆ ಗಮವನ್ನು ನೀಡಿ. ಬಹಳಷ್ಟನ್ನು ಓದಿ ಎಲ್ಲವನ್ನೂ ಮರೆಯುವದಕ್ಕಿಂತ ಸ್ವಲ್ಪವನ್ನೇ ಓದಿ ಅದನ್ನು ಅರ್ಥ ಮಾಡಿಕೊಳ್ಳುವತ್ತ ನಿಮ್ಮ ಗಮನ ಹರಿಸಿದರೆ ನೀವು ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ಪಾಸಾಗುತ್ತೀರಿ ಎಂದರು.

ಡಾ. ಬವಸರಾಜ ದಿಂಡೂರ 'ಗೆಲುವಿನ ಸೋಪಾನ–ಆತ್ಮವಿಶ್ವಾಸ' ವಿಷಯದ ಕುರಿತು ಮಾತನಾಡಿ, ಏನೇ ಸಾಧನೆ ಮಾಡಬೇಕೆಂದರೂ ಅದಕ್ಕೆ ಆತ್ಮವಿಶ್ವಾಸ ಮುಖ್ಯ. ಆತ್ಮವಿಶ್ವಾಸವು ಮನುಷ್ಯನನ್ನು ಎತ್ತರದ ಸ್ಥಾನದಲ್ಲಿಡುತ್ತದೆ. ಅದಕ್ಕಾಗಿ ನೀವು ಮೊದಲು ನಿಮ್ಮಲ್ಲಿ ಆತ್ಮವಿಶ್ವಾಸವನ್ನು ಬೆಳೆಸಿಕೊಂಡರೆ ಮಾತ್ರ ಗೆಲುವಿನ ಸೋಪಾನವನ್ನು ಕಾಣಲು ಸಾಧ್ಯ ಎಂದರು.

ಶಾಲಾ ಸಮಿತಿಯ ಚೇರಮನ್ ಎಸ್.ಬಿ. ಹರ್ಲಾಪೂರ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಶ್ರೀ ಅನ್ನದಾನ ವಿಜಯ ಬಾಲಿಕೆಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ, ಆಡಳಿತ ಮಂಡಳಿ ಸದಸ್ಯ ನಿಂಗನಗೌಡ ಲಕ್ಕನಗೌಡ್ರ, ಮಾಧ್ಯಮಿಕ ಶಾಲಾ ನೌಕರರ ಸಂಘದ ತಾಲೂಕಾಧ್ಯಕ್ಷ ಬಿ.ಡಿ. ಯರಗೊಪ್ಪ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮುಂತಾದವರಿದ್ದರು. ಶಿಕ್ಷಕ ಎಲ್. ಎನ್. ನಾಯಕ ನಿರೂಪಿಸಿದರು. ಮುಖ್ಯ ಶಿಕ್ಷಕ ಎಂ.ವಿ. ವೀರಾಪೂರ ಸ್ವಾಗತಿಸಿದರು. ಶಿಕ್ಷಕ ಎಂ.ವಿ. ಬಿಂಗಿ ವಂದಿಸಿದರು.

# ಅತಿಥಿ ಉಪನ್ಯಾಸಕರ ಪರಿಗಣನೆಗೆ ಆಗ್ರಹ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕೊಪ್ಪಳ ವಿಶ್ವವಿದ್ಯಾಲಯ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಕಾರ್ಯಾರಂಭ ಮಾಡಿದ್ದು, ವಿವಿ ವ್ಯಾಪ್ತಿಯ ಕಾಲೇಜುಗಳಲ್ಲಿ ಪರೀಕ್ಷೆಯ ಸಿದ್ಧತಾ ಕಾರ್ಯಗಳು ಶುರುವಾಗಿದೆ. ಈ ಚಟುವಟಿಕೆಗಳಿಗೆ ಅತಿಥಿ ಉಪನ್ಯಾಸಕರನ್ನು ಸಹ ಪರಿಗಣಿಸುವಂತೆ ಅತಿಥಿ ಉಪನ್ಯಾಸಕರ ಜಿಲ್ಲಾ ಸಂಘಟನೆಯ ಮುಖಂಡರು ಅಗ್ರಹಿಸಿದರು.

ಕುಕನೂರು ತಾಲೂಕಿನ ತಳಕಲ್‌ನಲ್ಲಿರುವ ವಿವಿ ಕಚೇರಿಗೆ ಮಂಗಳವಾರ ಭೇಟಿ ನೀಡಿದ ಅತಿಥಿ ಉಪನ್ಯಾಸಕರ ಸಂಘಟನೆಯ ಮುಖಂಡರು, ಕುಲ ಸಚಿವ ಪ್ರಸಾದ್ ಅವರಿಗೆ ವಿವಿ ವ್ಯಾಪ್ತಿಯ ಪರೀಕ್ಷಾ ಕಾರ್ಯಗಳಲ್ಲಿ ತಮ್ಮ ಸೇವೆ ಪರಿಗಣಿಸುವಂತೆ ಮನವಿ ಸಲ್ಲಿಸಿದರು.

ಸಂಘಟನೆಯ ಜಿಲ್ಲಾಧ್ಯಕ್ಷ ಡಾ.ವೀರಣ್ಣ ಸಜ್ಜನರ್ ಮಾತನಾಡಿ, ಸುಮಾರು 15–20 ವರ್ಷಗಳ ಸೇವಾ ಹಿರಿತನ, ಶೈಕ್ಷಣಿಕ ಅರ್ಹತೆ ಹೊಂದಿರುವ ಅನೇಕ ಅತಿಥಿ ಉಪನ್ಯಾಸಕರು ಸದ್ಯ ಸೇವೆಯಲ್ಲಿದ್ದು, ಹಿಂದಿನ ವಿವಿಗಳ ಪರೀಕ್ಷಾ ಕಾರ್ಯಗಳಡಿ ಪಠ್ಯಕ್ರಮ ರಚನೆ, ಪ್ರಶ್ನೆ ಪತ್ರಿಕೆ ತಯಾರಿಕೆ, ಆಂತರಿಕ ಮತ್ತು ಬಾಹ್ಯ ಸಂವೀಕ್ಷಕರು, ಪರೀಕ್ಷಾ ಕೊಠಡಿ, ಸಂವಿಕ್ಷಕರು, ಮೌಲ್ಯಮಾಪಕರಾಗಿಯೂ ಕಾರ್ಯನಿರ್ವಹಿಸಿದ ನಿದರ್ಶನಗಳಿವೆ. ಅತಿಥಿ ಉಪನ್ಯಾಸಕರನ್ನು ನಿರ್ಲಕ್ಷಿಸಿದರೆ ಪರೀಕ್ಷಾ ಕೊಠಡಿ ಸಂವಿಕ್ಷಣೆ, ಮೌಲ್ಯಮಾಪನ ಕಾರ್ಯ ಬಹಿಷ್ಕರಿಸುವುದಾಗಿ ಎಚ್ಚರಿಸಿದರು.

ಮನವಿ ಸ್ವೀಕರಿಸಿದ ಕುಲಸಚಿವ ಪ್ರಸಾದ್, ಮನವಿಯನ್ನು ಕುಲಪತಿಗಳ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು. ಈ ವೇಳೆ ಸಂಘಟನೆಯ ಮುಖಂಡರಾದ ಡಾ.ಪ್ರಕಾಶ್ ಬಳ್ಳಾರಿ, ಶಿವಬಸಪ್ಪ ಮಸ್ಕಿ, ಡಾ.ಮಹಾಂತೇಶ ನೆಲಾಗಣಿ, ಬಸವರಾಜ ಕರುಗಲ್, ವಿಜಯಕುಮಾರ್ ಕುಲಕರ್ಣಿ, ಡಾ.ತುಕಾರಾಂ ನಾಯಕ್, ಶಿವಮೂರ್ತಿ ಗುತ್ತೂರು, ಜ್ಞಾನೇಶ್ವರ ಪತ್ತಾರ, ಡಾ.ಸಣ್ಣದೇವೇಂದ್ರಸ್ವಾಮಿ, ರವಿ ಹಿರೇಮಠ, ನಾಗರಾಜ ದೊರೆ ಮತ್ತಿತರರು ಇದ್ದರು.



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ರಾಮಗಿರಿ ಗ್ರಾಮ ಪಂಚಾಯಿತಿಯಲ್ಲಿ ಸಂವಿಧಾನ ಜಾಗೃತಿ ಜಾಥಾವನ್ನು ಸ್ವಾಗತಿಸಲಾಯಿತು. ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಸಾರ್ವಜನಿಕರು ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

### ವಿಡಿಎಸ್ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಹಬ್ಬದ ಸಂಭ್ರಮ

# ಸಾಧನೆಗೆ ಅವಿರತ ಶ್ರಮ ಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿದ್ಯಾದಾನ ಸಮಿತಿ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಸರಸ್ವತಿ ಪೂಜಾ ಸಮಾರಂಭ ಹಾಗೂ ಮಕ್ಕಳ ಹಬ್ಬ ಕಾರ್ಯಕ್ರಮ ಜರುಗಿತು.

ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮಾತನಾಡಿ, ವಿದ್ಯಾದಾನ ಸಮಿತಿಯ ಶಾಲೆಯು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ತನ್ನದೇ ಆದ ಕೊಡುಗೆ ನೀಡುತ್ತಾ ಬಂದಿದೆ. ಸ್ಪರ್ಧಾತ್ಮಕ ಜಗತ್ತಿನಲ್ಲಿ ಸಾಧನೆಗೆ ಅವಿರತ ಶ್ರಮಬೇಕು. ದೂರದರ್ಶನ, ಮೊಬೈಲುಗಳು ಮಕ್ಕಳ ಮನಸ್ಸನ್ನು ಆಕ್ರಮಿಸಿಕೊಂಡಿವೆ. ಅವುಗಳನ್ನು ದಾಟಿ ಯಶಸ್ಸಿಗೆ ವಿದ್ಯಾರ್ಥಿಗಳು ಶ್ರಮಿಸಬೇಕು. ಇದರಲ್ಲಿ ಪೋಷಕರ ಹಾಗೂ ಶಿಕ್ಷಕರ ಜವಾಬ್ದಾರಿಯೂ ಇದೆ ಎಂದರು.



ಧ.ಗ್ರಾ ಯೋಜನಾಧಿಕಾರಿ ಸುರೇಂದ್ರ ನಾಯಕ ಮಾತನಾಡಿ, ನಾವು ನಮ್ಮ ಜೀವನದಲ್ಲಿ ಧನಾತ್ಮಕ ಚಿಂತನೆಯನ್ನು ಹೊಂದಿ ಶ್ರಮ ಪಟ್ಟರೆ ನಮ್ಮ ಜೀವನ ಉತ್ತಮವಾಗುತ್ತದೆ. ಆತ್ಮಸ್ಥೈರ್ಯದೊಂದಿಗೆ ನಮ್ಮ ಸಂಸ್ಕೃತಿ, ಆಚಾರ–ವಿಚಾರವನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಶಾಲೆಯ ಮುಖ್ಯೋಪಾಧ್ಯಾಯ ಎಂ.ವಿ. ಹವಾಲ್ದಾರ ಮಾತನಾಡಿದರು. ಡಾ. ಪವನ ಎಸ್.ಹುಯಿಲಗೋಳ, ರವಿ ಎಂ.ಹೆಬ್ಬಳ್ಳಿ, ಡಾ. ಗಂಗೂಬಾಯಿ ಪವಾರ ಮುಂತಾದವರು ವೇದಿಕೆಯಲ್ಲಿದ್ದರು.

ಅಧ್ಯಕ್ಷತೆ ವಹಿಸಿದ್ದ ಡಿ.ಬಿ. ಹುಯಿಲಗೋಳ ಮಾತನಾಡಿ, ಹಿಂದಿನ ಕಾಲದಲ್ಲಿ ಕುಟುಂಬ, ಸಮಾಜ, ಗುರುಕುಲ, ಧರ್ಮಕ್ಷೇತ್ರ ಮತ್ತು ಮಂದಿರಗಳು ಸಂಸ್ಕಾರ ಕೇಂದ್ರಗಳಾಗಿದ್ದವು. ಅದೇ ರೀತಿ ನಮ್ಮ ಶಿಕ್ಷಣ ಸಂಸ್ಥೆಯು ಶಿಕ್ಷಣದ ಜೊತೆಗೆ ಭಾರತೀಯ ಪರಂಪರೆ, ಸಂಸ್ಕೃತಿ ಮತ್ತು ಸಂಸ್ಕಾರ ನೀಡುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರತೀಕ. ಎಸ್.ಹುಯಿಲಗೋಳ, ವಾದಿರಾಜ ಕಾತೋಟೆ, ಜಿ.ಡಿ. ಪಡೆಸೂರ, ಎ.ಬಿ. ಬೂದಿಹಾಳ, ಎಂ.ವಿ. ಹವಾಲ್ದಾರ, ಎಂ.ಆರ್. ಡೊಳ್ಳಿನ ಉಪಸ್ಥಿತರಿದ್ದರು. ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಅಂಗ ಸಂಸ್ಥೆಯ ಪ್ರಾಚಾರ್ಯರು, ಮುಖ್ಯಸ್ಥರು, ಉಪನ್ಯಾಸಕರು, ಸಮಸ್ತ ಶಿಕ್ಷಕ/ ಸಿಬ್ಬಂದಿ ವರ್ಗದವರು, ಪಾಲಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಜಯಶ್ರೀ ಪುರಮಶೆಟ್ಟಿ ಬಹುಮಾನ ವಿತರಣೆ ಕಾರ್ಯಕ್ರಮ ನಡೆಸಿಕೊಟ್ಟರು. ಎಂ.ಎನ್. ಹುಬ್ಬಳ್ಳಿ ಸ್ವಾಗತಿಸಿದರು. ಕಾವೇರಿ ಲಮಾಣಿ, ಭುವನೇಶ್ವರಿ ಕವಲೂರ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಆರ್.ಡಿ. ಪಡೆಸೂರ ಕಾರ್ಯಕ್ರಮ ನಿರ್ವಹಿಸಿದರು. ಮಹೇಶ ಬ್ಯಾಳಿ ವಂದಿಸಿದರು.

# ವಿದ್ಯಾರ್ಥಿಗಳು ನಾಯಕತ್ವ ಗುಣ ಬೆಳೆಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿದ್ಯಾರ್ಥಿಗಳು ಶಿಕ್ಷಣ ದೊಂದಿಗೆ ನಾಯಕತ್ವ ಗುಣ ಬೆಳೆಸಿಕೊಳ್ಳಬೇಕು ಎಂದು ಪ್ರೇರಣಾ ಕಾರ್ಯಕ್ರಮದ ಜಿಲ್ಲಾ ಸಂಯೋಜಕ ತಿಮ್ಮೇಶ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ, ಶಿಕ್ಷಣ ಫೌಂಡೇಶನ್ ಮತ್ತು ಜಿಲ್ಲಾ ಪ್ರೇರಣಾ ಸಂಸ್ಥೆಯ ಸಹಯೋಗದಲ್ಲಿ



ವಿದ್ಯಾರ್ಥಿಗಳಿಗೆ ಮೂರು ಬಣ್ಣದ ಸ್ಟಾರ್ ವಿತರಿಸಿ ಮಾತನಾಡಿದರು. ಪ್ರಾಥಮಿಕ ಹಂತದಲ್ಲಿ ವಿದ್ಯಾರ್ಥಿಗಳು ಗುರುಗಳು ಹೇಳಿದ ಪಾಠಗಳೊಂದಿಗೆ ನಾಯಕತ್ವ ಗುಣ, ಶಿಸ್ತು, ಸಮಯ ಪ್ರಜ್ಞೆ ಬೆಳೆಸಿಕೊಳ್ಳುವುದರಿಂದ ಉತ್ತಮ ನಾಗರಿಕರಾಗಿ ಹೊರಹೊಮ್ಮಲು ಸಹಕಾರಿಯಾಗುತ್ತದೆ. ಪ್ರೇರಣಾ ಸಂಸ್ಥೆ ಮಕ್ಕಳ ಕಲಿಕೆಗಾಗಿ ಪ್ರೇರಣೆ ನೀಡುತ್ತಾ ಬಂದಿದ್ದು, ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಮೂವರಿಗೆ ಸ್ಕಾಲರ್‌ಶಿಪ್ ನೀಡಲಾಗುವುದು ಎಂದರು. ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ, ಕೆ.ಎಂ. ಹೆರಕಲ್, ಎಂ.ಎಂ. ಕೊಪ್ಪಳ, ವಿ.ಎಂ. ಕಂಠಿ, ಎಸ್.ಡಿ. ಪಂಡಿತ ಹಾಗೂ ವಿದ್ಯಾರ್ಥಿಗಳು ಇದ್ದರು.

# ಅರ್ಜಿಗಳಿಗೆ ನಿಯಮಾನುಸಾರ ಪರಿಹಾರ

▶▶ಮೊದಲನೇ ಪುಟದಿಂದ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಾಲೂಕಾ ಪಂಚಾಯತ ಸಭಾಂಗಣದಲ್ಲಿ ಬುಧವಾರ ತಾಲೂಕಾಡಳಿತದಿಂದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮ ಜರುಗಿತು.

ತಹಸೀಲ್ದಾರ ವಾಸುದೇವಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹೆಚ್ ಸೇರಿದಂತೆ ಎಲ್ಲ ಇಲಾಖೆಗಳ ಅಧಿಕಾರಿಗಳ ಸಮ್ಮುಖದಲ್ಲಿ ಖುದ್ದು ಜಿಲ್ಲಾಧಿಕಾರಿಗಳೇ ಪ್ರತಿಯೊಬ್ಬರ ಅರ್ಜಿ ಪಡೆದು ಅರ್ಜಿದಾರರೊಂದಿಗೆ ಆತ್ಮೀಯವಾಗಿ ಮಾತನಾಡಿ ಅಹವಾಲು ಆಲಿಸಿದರು.

ಮುಖ್ಯವಾಗಿ ಲಕ್ಷ್ಮೇಶ್ವರ ಪಟ್ಟಣಕ್ಕೆ ಕಳೆದ ಒಂದು ತಿಂಗಳಿನಿಂದ ನದಿ ನೀರು ಸರಬರಾಜು ನಿಂತಿದ್ದು, ಸಾರ್ವಜನಿಕರು ನೀರಿಗಾಗಿ ಪರಿತಪಿಸುವಂತಾಗಿದೆ ಎಂದು ಪತ್ರಕರ್ತರು ಮತ್ತು ಸಾರ್ವಜನಿಕರು ಜಿಲ್ಲಾಧಿಕಾರಿಗಳ ಗಮನಕ್ಕೆ ತರುತ್ತಿದ್ದಂತೆಯೇ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿಗಳು ತುಂಗಭದ್ರಾ ಜಲಾಯಶದ ಪ್ರಾದೇಶಿಕ ಆಯುಕ್ತರನ್ನು ಸಂಪರ್ಕಿಸಿ ಜಲಾಶಯದಿಂದ ಫೆ.7ರಂದೇ ನದಿಗೆ ನೀರು ಬಿಡಲಾಗಿದೆ. 3-4 ದಿನಗಳಲ್ಲಿ ನೀರು ಬರಲಿದೆ ಎಂಬ ಮಾಹಿತಿ ಪಡೆದರು.

ಆದರೆ ನೀರು ಹರಿದು ಬರುವ ವೇಳೆ ನದಿ ಪಾತ್ರದಲ್ಲಿನ ರೈತರು ಹಗಲೂ-ರಾತ್ರಿ ಪಂಪ್‌ಸೆಟ್‌ಗಳ ಮೂಲಕ ದೊಡ್ಡ ಪ್ರಮಾಣದಲ್ಲಿ ನೀರೆತ್ತಲಾಗುತ್ತದೆ. ಪಟ್ಟಣಕ್ಕೆ ನೀರೆತ್ತುವ ಮೇವುಂಡಿ ಜಾಕ್‌ವೆಲ್‌ನಿಂದಲೇ ರೈತರು ಪಂಪಸೆಟ್ ಮೂಲಕ ನೀರೆತ್ತುದ್ದಾರೆ.

ಅಲ್ಲದೇ ಸದ್ಯದ ಪರಿಸ್ಥಿತಿಯಲ್ಲಿ ಅಲ್ಲಿ ನೀರು ಸಂಗ್ರಹವಾಗುವ ವ್ಯವಸ್ಥೆಯಿಲ್ಲ ಎಂಬ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಕೂಡಲೇ ತಹಸೀಲ್ದಾರ, ಪುರಸಭೆ, ತಾಲೂಕಾ ಪಂಚಾಯತಿ, ಹೆಸ್ಕಾಂ ಮತ್ತು ಪೊಲೀಸರು ಸ್ಥಳಕ್ಕೆ ತೆರಳಿ ಅಲ್ಲಿರುವ ರೈತರ ಪಂಪ್‌ಸೆಟ್ ತೆರವುಗೊಳಿಸುವಂತೆ ಸೂಚಿಸಿದರು. ಈ ಕೆಲಸವನ್ನು ಹಾವೇರಿ, ರಾಣೇಬೆನ್ನೂರು, ಹರಿಹರ ಭಾಗದಲ್ಲಿಯೂ ಮಾಡುವಂತೆ ಅಲ್ಲಿನ ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿ, ಗದಗ ಜಿಲ್ಲೆಯ 4 ತಾಲೂಕುಗಳಿಗೆ ತುಂಗಭದ್ರಾ ನದಿ ನೀರೇ ಆಸರೆಯಾಗಿದ್ದು, ಸಹಕರಿಸುವಂತೆ ಕೋರಿದರು. ಈ ವೇಳೆ ಮುಖ್ಯಾಧಿಕಾರಿಗಳಿಗೆ ಪಟ್ಟಣ ವ್ಯಾಪ್ತಿಯ ಎಲ್ಲ ಬೋರ್‌ವೆಲ್ ಸರಿಪಡಿಸಿ ನೀರಿನ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಿ ಎಂದು ಸೂಚಿಸಿದರು.

ಬಳಿಕ ಪಟ್ಟಣದಲ್ಲಿನ ಆಶ್ರಯ ನಿವೇಶನ ಫಲಾನುಭವಿಗಳ ಆಯ್ಕೆಯಲ್ಲಾದ ಅನ್ಯಾಯ ಸರಿಪಡಿಸಬೇಕು, ವಿವಿಧ ಯೋಜನೆಗಳಡಿ ರೈತರಿಗೆ ಲಭಿಸಿದ ಸಹಾಯಧನ ಅವರ ಸಾಲದ ಖಾತೆಗೆ ಜಮೆ ಮಾಡಿಕೊಳ್ಳುತ್ತಿರುವ ಬ್ಯಾಂಕ್ ಅಧಿಕಾರಿಗಳ ಕ್ರಮಕ್ಕೆ ಬ್ರೇಕ್ ಹಾಕಬೇಕು, ಗೃಹಲಕ್ಷ್ಮೀ, ಶಕ್ತಿಯೋಜನೆ, ಪಿಂಚಣಿಯಲ್ಲಾಗುತ್ತಿರುವ ಸಮಸ್ಯೆ, ತಾಲೂಕಿನಲ್ಲಿ ಹದಗೆಟ್ಟ ರಸ್ತೆಗಳು, ಹಳ್ಳ ಹಿಡಿದ ಯುಜಿಡಿ ಯೋಜನೆ, ವಿದ್ಯುತ್, ತಾಲೂಕು ಕೇಂದ್ರವಾದರೂ ಶಿರಹಟ್ಟಿಗೆ ಅಲೆಯುವುದು ತಪ್ಪದಿರುವ ಬಗ್ಗೆ, ಶಿಗ್ಲಿ ಗ್ರಾಮದಲ್ಲಿ ನೇಕಾರರು ಅನುಭವಿಸುತ್ತಿರುವ ಸಮಸ್ಯೆ, ನೀರಾವರಿ ರೈತರು ಅಂತರ್ಜಲಮಟ್ಟ ಕುಸಿತದ ಜತೆಗೆ ಕಾಡುಪ್ರಾಣಿಗಳಿಂದಾಗುತ್ತಿರುವ ಹಾನಿ, ಸೋಮೇಶ್ವರ ಸಹಕಾರಿ ನೂಲಿನ ಗಿರಣಿಯಿಂದ ತಮಗೆ ಅನ್ಯಾಯವಾಗಿದೆ ಎಂಬ ರೈತ ಕುಟುಂಬದ ಮನವಿ ಸೇರಿ 50ಕ್ಕೂ ಹೆಚ್ಚು ಸಮಸ್ಯೆಗಳನ್ನು ಹೊತ್ತು ಅರ್ಜಿಯೊಂದಿಗೆ ಬಂದ ರೈತರು, ವೃದ್ಧರು, ಮಹಿಳೆಯರು, ಸಂಘಟಕರು ಸಾರ್ವಜನಿಕರಿಗೆ ಸ್ಥಳದಲ್ಲಿಯೇ ಪರಿಹಾರ ಸೂಚಿಸಿದರು.

ಈ ವೇಳೆ ಕೃಷಿ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಾರಿಗೆ, ಜಿ.ಪಂ, ಪಿಡಬ್ಲೂಡಿ ಸೇರಿ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.

## 'ಸಂವಿಧಾನ ಜಾಗೃತಿ ಜಾಥಾ ರಥ'ಕ್ಕೆ ವೈಭವದ ಸ್ವಾಗತ

# ಸಂವಿಧಾನದ ಪೀಠಿಕೆ ಜೀವನದ ಮಂತ್ರವಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂವಿಧಾನ ಅಂಗೀಕಾರಗೊಂಡು 74 ಸಂವತ್ಸರಗಳನ್ನು ಪೂರೈಸಿದ ಸಂಭ್ರಮದ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಸಂಚರಿಸುತ್ತಿರುವ 'ಸಂವಿಧಾನ ಜಾಗೃತಿ ಜಾಥಾ ರಥ' ಬುಧವಾರ ಲಕ್ಷ್ಮೇಶ್ವರಕ್ಕೆ ಆಗಮಿಸಿದ ಸಂದರ್ಭದಲ್ಲಿ ತಾಲೂಕಾಡಳಿತ, ತಾ.ಪಂ, ಶಿಕ್ಷಣ ಇಲಾಖೆ, ಪುರಸಭೆ ಮತ್ತ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಅದ್ಧೂರಿ ಮತ್ತು ವೈಭವದಿಂದ ಸ್ವಾಗತಿಸಲಾಯಿತು.

ಪಟ್ಟಣದ ಗದಗ ನಾಕಾ ಬಳಿ ರಥಕ್ಕೆ ತಹಸೀಲ್ದಾರ ವಾಸುದೇವ ಸ್ವಾಮಿ ಪುಷ್ಪಮಾಲೆ ಹಾಕಿ ಮಹಿಳೆಯರ ಪೂರ್ಣಕುಂಭ, ಆರತಿ, ಕಲಾತಂಡ, ಶಾಲಾ ವಿದ್ಯಾರ್ಥಿಗಳ ನೃತ್ಯ ವೈಭವದೊಂದಿಗೆ ಸ್ವಾಗತಿಸಿದರು.

ವಿವಿಧ ಶಾಲೆಗಳ ಸಾವಿರಾರು ಮಕ್ಕಳು ವಿವಿಧ ವೇಷಭೂಷಣಗಳನ್ನು ಧರಿಸಿ ಎತ್ತಿನ ಬಂಡಿಯನ್ನೇರಿ, ಬಾಬಾಸಾಹೇಬ ಅಂಬೇಡ್ಕರ್ ಹಾಗೂ ಸಂವಿಧಾನಕ್ಕೆ ಜಯಘೋಷ ಕೂಗುತ್ತ, ಕೋಲಾಟ, ಜಾನಪದ ನೃತ್ಯ, ಪಥಸಂಚಲನದೊಂದಿಗೆ ಹೊಸ ಬಸ್ ನಿಲ್ದಾಣದ ಮೂಲಕ ಜಾಗೃತಿ ರಥ ಸಾಗಿ ಉಮಾವಿದ್ಯಾಲಯದಲ್ಲಿ ಸಭೆಯಾಗಿ ಮಾರ್ಪಟ್ಟಿತು.



ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆಯ ವಿದ್ಯಾರ್ಥಿಗಳಿಂದ ಜಾನಪದ ನೃತ್ಯ, ಕೋಲಾಟ ಮತ್ತು ಸಂವಿಧಾನ ಪೀಠಿಕೆಯ ರೂಪಕ ಮತ್ತು ಪಟ್ಟಣದ ಸರ್ಕಾರಿ ಪ್ರಾಥಮಿಕ ಶಾಲೆ ನಂ-4ರ ಮಕ್ಕಳ ಕೋಲಾಟ ಸೇರಿ ವಿವಿಧ ಶಾಲಾ ಮಕ್ಕಳ ವಿಶೇಷ ಪಾಲ್ಗೊಳ್ಳುವಿಕೆ ಗಮನ ಸೆಳೆಯಿತು. ಹುಯಿಲಗೋಳದ ಜೇನುಗೂಡು ಕಲಾತಂಡದಿಂದ ಸಂವಿಧಾನ ಗೀತೆಗಳು ಮೊಳಗಿದವು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸಭಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಾರ್ವಭೌಮ, ಜಾತ್ಯಾತೀತ, ಭ್ರಾತೃತ್ವ, ಸಮಾನತೆಯನ್ನೊಳಗೊಂಡ ಭಾರತದ ಅಭಿವೃದ್ಧಿಗೆ ಪೂರಕವಾಗಿ ರಚಿತವಾದ ವಿಶ್ವಮಾನ್ಯವಾದ ಸಂವಿಧಾನ ಪ್ರತಿಯೊಬ್ಬ ಪ್ರಜೆಯ ದೊಡ್ಡ ಅಸ್ತ್ರವೇ ಆಗಿದೆ. ಎಲ್ಲರೂ ಸಂವಿಧಾನದ ಪೀಠಿಕೆಯನ್ನು ನಿತ್ಯ ಜೀವನದ ಮಂತ್ರವಾಗಿಸಿಕೊಂಡು ಮುನ್ನಡೆಯಬೇಕು. ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವು ಸಂವಿಧಾನದ ಆಶಯ, ಮೌಲ್ಯ, ಮಹತ್ವದ ಬಗ್ಗೆ ಎಲ್ಲರಿಗೂ ಅರಿವು ಮೂಡಿಸುವುದಾಗಿದೆ. ಪ್ರತಿಯೊಬ್ಬರ ಜೀವನದ ಹೃದಯ ಭಾಗದಂತಿರುವ ಸಂವಿಧಾನದ ಆಶಯಗಳನ್ನರಿತು ನಡೆದರೆ ತಂದೆ-ತಾಯಿಯಂತೆ ಬದುಕಿಗೆ ಮಾರ್ಗದರ್ಶನ ಮಾಡುತ್ತದೆ. ಹಕ್ಕು ಬಾಧ್ಯತೆಗಳೊಂದಿಗೆ ಸಾಮಾಜಿಕ ಜವಾಬ್ದಾರಿ-ಕಳಕಳಿ, ಸಂವಿಧಾನದ ಆಶಯಕ್ಕೆ ಧಕ್ಕೆ ಬಾರದಂತೆ ಭಾರತ ಮಾತೆಯ ಮಕ್ಕಳಾದ ನಾವೆಲ್ಲ ಒಂದೆಂಬ ಭಾವನೆಯೊಂದಿಗೆ ಮುನ್ನಡೆಯೋಣ ಎಂದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ ಮಾತನಾಡಿದರು. ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಸಿಡಿಪಿಓ ಮೃತ್ಯುಂಜಯ ಜಿ, ಡಾ. ಎನ್.ಎಂ. ಹವಳದ, ಬಿ.ಎಂ. ಕಾತರಾಳ, ಎಂ.ಬಿ. ಹೊಸಮನಿ, ಬಿ.ಎಸ್. ಹರ್ಲಾಪೂರ, ಸಿಪಿಐ ನಾಗರಾಜ ಮಾಡಳ್ಳಿ, ಮುಖ್ಯೋಪಾಧ್ಯಾಯ ಎಸ್.ಎಚ್. ಪೂಜಾರ, ಪುರಸಭೆಯ ಸದಸ್ಯರು, ಶಿಕ್ಷಣ ಇಲಾಖೆಯ ಬಿಆರ್‌ಪಿಗಳು, ಸಿಆರ್‌ಪಿಗಳು, ವಿವಿಧ ಶಾಲೆಗಳ ಶಿಕ್ಷಕರು ಮತ್ತಿತರಿದ್ದರು.

ಸಮಾಜಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎಸ್.ಬಿ. ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾ.ಪಂ ಇಓ ಕೃಷ್ಣಪ್ಪ ಧರ್ಮರ ಸ್ವಾಗತಿಸಿದರು. ಈಶ್ವರ ಮೇಡ್ಲೇರಿ ನಿರೂಪಿಸಿದರು.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಹಿಂದಿ ವಿಷಯದ ಫೋನ್ ಇನ್ ನೇರ ಕಾರ್ಯಕ್ರಮ

# ಧೈರ್ಯದಿಂದ ಗುರಿಯನ್ನು ತಲುಪಿ

■ವಿಜಯಸಾಕ್ಷಿ ಸುದ್ದಿ, ಗದಗ

ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಫೆ.14ರಂದು ನಡೆದ ಮೂರನೇ ದಿನದ ಹೆಚ್ಚು ಮಕ್ಕಳ ಭಾಗವಹಿಸುವಿಕೆಯೊಂದಿಗೆ ಯಶಸ್ವಿಯಾಗಿ ನಡೆಯಿತು. ಹಿಂದಿ ಭಾಷೆಯ ಫೋನ್ ಇನ್ ಕಾರ್ಯಕ್ರಮದಲ್ಲಿ ಮಕ್ಕಳು, ಉತ್ಸಾಹದಿಂದ ಕರೆಮಾಡಿ, ತಮ್ಮ ಸಂದೇಹಗಳಿಗೆ ಸಂಪನ್ಮೂಲ ಶಿಕ್ಷಕರಿಂದ ಪರಿಹಾರ ಕಂಡುಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಉಪನಿರ್ದೇಶಕ ಎಂ.ಎ. ರಡ್ಡೇರ ಮಾತನಾಡಿ, ನೀವು ಸತತ ಪ್ರಯತ್ನಶೀಲರಾಗಿರಬೇಕು. ಕೇಳುವ, ನೋಡುವ, ತಿಳಿದುಕೊಳ್ಳುವ, ಆಲೋಚಿಸುವ ಗ್ರಹಣ ಶಕ್ತಿಯನ್ನು ಬೆಳೆಸಿಕೊಳ್ಳಬೇಕು. ನಿಮ್ಮಲ್ಲಿ ಸೂಕ್ತ ಪ್ರಜ್ಞೆ, ಅಪಾರ ಪ್ರಜ್ಞೆ, ಅದ್ಭುತವಾದ ಜ್ಞಾನವಿದೆ. ಪ್ರಶ್ನೆಗಳಿಗೆ ಮೌಲ್ಯಯುತ, ಅಗತ್ಯವಾಗಿರುವುದನ್ನು ಉತ್ತರವನ್ನು ಬರೆಯಬೇಕು. ನಿಮ್ಮ ಉತ್ತರವನ್ನು ಮೌಲ್ಯಮಾಪಕರು ನೋಡಿದಾಗ ಸಂತೋಷವಾಗಬೇಕು. ಅವರು ಒಪ್ಪುವ ಹಾಗೂ ಸರಿ ಎನ್ನುವ ರೀತಿಯಲ್ಲಿರಬೇಕು ಎಂದು ಫೋನ್ ಇನ್ ನೇರ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಆರ್ ಎಸ್ ಬುರಡಿ ಮಾತನಾಡಿ, ವಿದ್ಯಾರ್ಥಿಗಳು ಓದಿದ ಮತ್ತು ಬರೆದ ವಿಷಯವನ್ನು ಹೇಗೆ ನೆನಪಿನಲ್ಲಿ ಇಟ್ಟುಕೊಳ್ಳಬೇಕು, ಸಮಯವನ್ನು ಹೇಗೆ ಸದುಪಯೋಗಪಡಿಸಿಕೊಳ್ಳಬೇಕು, ಅಕ್ಷರಗಳನ್ನು ಹೇಗೆ ದುಂಡಾಗಿ ಬರೆಯಬೇಕು ಎಂಬುದನ್ನು ಆಲೋಚಿಸಬೇಕು. ಪೌಷ್ಠಿಕಾಂಶಯುಕ್ತ ಆಹಾರವನ್ನು ಸರಿಯಾಗಿ ಸೇವಿಸಬೇಕು. ಪರೀಕ್ಷೆ ಭಯ ದೂರಮಾಡಿ ಸಂಭ್ರಮಿಸಬೇಕು, ಒತ್ತಡದಿಂದ ಮುಕ್ತರಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ಶಿಕ್ಷಕರಾಗಿ ವ್ಹಿ.ಐ. ಕುಲಕರ್ಣಿ, ವಂದನಾ ಮಿಸಾಳ, ಎಸ್.ಎಸ್. ಮುಧೋಳ, ಲತಾ ಕಾಲವಾಡ, ಮಾರ್ಗರೇಟ್ ಕಿತ್ತೂರ, ಎ.ಆರ್. ಮಲ್ಲನಕೇರಿ, ಹೆಚ್.ಎ. ಫಾರೂಕಿ, ಶ್ಯಾಮ ಲಾಂಡೆ, ಐ.ಬಿ. ಮಡಿವಾಳರ, ಪಿ.ಡಿ. ಮಂಗಳೂರ, ಜ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಕೊಟ್ರೇಶ ಮೆಣಸಿನಕಾಯಿ, ಕೆ.ಎಮ್. ಗೌಡರ ಹಾಗೂ ನಾಗರಾಜ ಗಾಳಿ ಉಪಸ್ಥಿತರಿದ್ದರು.



ಈ ಸಂದರ್ಭದಲ್ಲಿ ಭಾಗವಹಿಸಿದ ಹಿಂದಿ ಭಾಷೆಯ ಸಂಪನ್ಮೂಲ ವ್ಯಕ್ತಿಗಳು ಮಕ್ಕಳಿಗೆ ಪರೀಕ್ಷೆ ಮುಗಿಯುವರೆಗೆ ಸತತ ಬೆಂಬಲದ ಭರವಸೆ ನೀಡಿದರು. ಕೇವಲ ಫೋನ್ ಇನ್ ಕಾರ್ಯಕ್ರಮದಲ್ಲಿ ಮಾತ್ರವಲ್ಲ, ಪರೀಕ್ಷೆ ಪ್ರಾರಂಭವಾಗುವ ಹಿಂದಿನ ದಿನದವರೆಗೂ ಮಕ್ಕಳು ತಾವು ಓದುವಾಗ, ಬರೆಯುವಾಗ ಏನಾದರೂ ಗೊಂದಲಗಳು ಅಥವಾ ಸಂದೇಹಗಳು ಕಂಡು ಬಂದಲ್ಲಿ ಪ್ರತಿದಿನ ಸಾಯಂಕಾಲ 5.30ರಿಂದ 6.30ರ ಒಳಗೆ ಈಗಾಗಲೇ ನೀಡಿದ ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಿ ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು ಎಂದು ತಿಳಿಸಿದರು.

# ನೀರಿನ ಸಮಸ್ಯೆ ಇತ್ಯರ್ಥಕ್ಕೆ ಸರ್ಕಾರ ಬದ್ಧ

▶▶ಮೊದಲನೇ ಪುಟದಿಂದ

ಪ್ರತಿನಿತ್ಯ ನೀರು ಪೂರೈಸಬೇಕಾಗಿದ್ದು ನಮ್ಮ ಕರ್ತವ್ಯ. ಎಸ್‌ಪಿಎಂಎಲ್ ಎಂಬ ಗುತ್ತಿಗೆದಾರ ಈ ಯೋಜನೆ ಕಾಮಗಾರಿಗೆ ಕೈಗೆತ್ತಿಕೊಂಡಿದ್ದ. 2017ರಲ್ಲೇ ಈ ಯೋಜನೆ ಪೂರ್ಣಗೊಳ್ಳಬೇಕಾಗಿತ್ತು. ಆದರೂ 2023ರ ಒಳಗಾಗಿ ಯೋಜನೆ ಪೂರ್ಣಗೊಳಿಸಲು ಸಮಯ ನೀಡಲಾಗಿತ್ತು. ಆದರೂ ಪೂರ್ಣಗೊಂಡಿಲ್ಲ. ಈ ಹಿನ್ನೆಲೆಯಲ್ಲಿ ಗುತ್ತಿಗೆದಾರ ಬ್ಯಾಂಕ್‌ನಲ್ಲಿ ಇಟ್ಟ ಠೇವಣಿ ಮುಟ್ಟುಗೋಲು ಹಾಕಲು ಕ್ರಮ ಕೈಗೊಳ್ಳಲಾಗಿತ್ತು. ಆದರೆ, ಈ ಪ್ರಕ್ರಿಯೆಗೂ ಗುತ್ತಿಗೆದಾರ ಕೋರ್ಟ್‌ನಿಂದ ತಡೆಯಾಜ್ಞೆ ತರಲು ಯಶಸ್ವಿಯಾದ. ಮಾರ್ಚ್. 5 ರಂದು ಕೋರ್ಟ್ ನಿಂದ ಆದೇಶ ಬರಲಿದೆ. ಈ ಆದೇಶ ಅನ್ವಯ ಹೊಸ ಗುತ್ತಿಗೆದಾರನಿಗೆ ಈ ಕಾಮಗಾರಿ ನೀಡಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಉತ್ತರಿಸಿದರು.


ಇನ್ನೂ ಗದಗ ಬೆಟಗೇರಿ "ಎ' ಪಾಯಿಂಟ್ ವರೆಗೆ ಹರಿಯುವ ನೀರು ಅಲ್ಲಲ್ಲಿ ಸೋರಿಕೆ ಆಗುತ್ತಿರುವ ಕುರಿತು ಉತ್ತರಿಸಿದ ಸಚಿವರು "ಅಮೃತ ಯೋಜನೆ ಅಡಿ 34 ಕೋಟಿ ವೆಚ್ಚದಲ್ಲಿ ಹೊಸ ಪೈಪ್‌ಲೈನ್ ಅಳವಡಿಸಲು ಕರ್ನಾಟಕ ನಗರ ನೀರು ಸರಬರಾಜು ಮಂಡಳಿಗೆ ಗುತ್ತಿಗೆ ನೀಡಲಾಗಿದೆ. ಸರ್ವೇ ಪೂರ್ಣಗೊಂಡಿದೆ. ತಾಂತ್ರಿಕ ಮಂಜೂರಾತಿಗೆ ಮಂಡನೆ ಆಗಿದೆ. ಕೆಲವೇ ದಿನಗಳಲ್ಲಿ ಯೋಜನೆ ಆರಂಭಿಸಲಾಗುವುದು ಎಂದು ಸಚಿವರು ಉತ್ತರಿಸಿದರು.

# ಸ್ನಾತಕೋತ್ತರ ಕೇಂದ್ರ ಸ್ಥಾಪನೆಗೆ ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸ್ನಾತಕೋತ್ತರ ಪದವಿ ಕೇಂದ್ರ ತೆರೆಯಲು ಕುಲಸಚಿವ ಕೆ.ಎನ್. ರುದ್ರೇಶ ಮಂಗಳವಾರ ಸ್ಥಳ ಪರಿಶೀಲನೆ ನಡೆಸಿದರು.

ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಅವರ ಕೋರಿಕೆ ಮೇರೆಗೆ ಪಟ್ಟಣದಲ್ಲಿ ಸ್ನಾತಕೋತ್ತರ ಕೇಂದ್ರ ಸ್ಥಾಪಿಸಲು ಸರ್ಕಾರಕ್ಕೆ ಅಂತಿಮ ವರದಿ ಸಲ್ಲಿಸಲು ವಿಜಯನಗರ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯ ಬಳ್ಳಾರಿ ಕುಲಸಚಿವರು ಆಗಮಿಸಿದ್ದರು. ಕಾಲೇಜಿನ ಕೊಠಡಿಗಳ ಲಭ್ಯತೆ ಹಾಗೂ ಸ್ಥಳ ಪರಿಶೀಲಿಸಿದ ಅವರು, ಸ್ನಾತಕೋತ್ತರ ಕೇಂದ್ರ ಸ್ಥಾಪಿಸಲು ಸರ್ಕಾರಕ್ಕೆ ಅಂತಿಮ ವರದಿ ಸಲ್ಲಿಸುವದಾಗಿ ತಿಳಿಸಿದರು.



ಸಿಂಡಿಕೇಟ್ ಸದಸ್ಯ ಟಿ.ಎಂ. ರಾಜಶೇಖರ, ಕಾಲೇಜಿನ ಪ್ರಾಚಾರ್ಯ ಷಣ್ಮುಖಗೌಡ, ಸ್ಥಳೀಯ ಮುಖಂಡ ಗುಂಡಗತ್ತಿ ಕೊಟ್ರಪ್ಪ ಹಾಗೂ ಇತರರು ಹಾಜರಿದ್ದರು.

# ರೈತರ ಬಂಧನ ಕೇಂದ್ರದ ಹತಾಶೆಯ ಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಿ ದಿಲ್ಲಿಯಲ್ಲಿ ನಡೆಯುತ್ತಿರುವ ಪ್ರತಿಭಟನೆಗೆ ತೆರಳುತ್ತಿದ್ದ ಕರ್ನಾಟಕ ರಾಜ್ಯದ ರೈತರನ್ನು ಮಧ್ಯಪ್ರದೇಶದ ಬೋಪಾಲ್‌ನಲ್ಲಿ ಬಂಧಿಸಿರುವುದು ಖಂಡನೀಯ. ಇದು ಕೇಂದ್ರ ಸರ್ಕಾರದ ಹತಾಶೆಯ ಕ್ರಮ ಎಂದು ವೆಲ್‌ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಹೇಳಿದ್ದಾರೆ.

ರೈತರ ಪ್ರತಿಭಟನೆಯನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ಶ್ರಮಿಸುತ್ತಿದೆ. ಈಗಾಗಲೇ ಹತ್ತು ವರ್ಷಗಳ ಅವಧಿಯಲ್ಲಿ ಸಾವಿರಾರು ರೈತರು ಆತ್ಮಹತೆಗೆ ಶರಣಾಗಿದ್ದಾರೆ. ರೈತರ ಪ್ರಾಣದೊಂದಿಗೆ ಸರಕಾರ ಚೆಲ್ಲಾಟವಾಡುದನ್ನು ಕೂಡಲೇ ನಿಲ್ಲಿಸಬೇಕು. ರೈತರ ಈ ಹೋರಾಟಕ್ಕೆ ವೆಲ್‌ಫೇರ್ ಪಾರ್ಟಿ ಸಂಪೂರ್ಣವಾಗಿ ಬೆಂಬಲಿಸುತ್ತದೆ. ರೈತರ ಹೋರಾಟದ ಮುಂದೆ ತನ್ನ ಸರ್ವಾಧಿಕಾರಿ ಧೋರಣೆ-ಯ ಆಟ ನಡೆಯದು ಎಂದು ಅರಿತಿರುವ ಕೇಂದ್ರ ಸರಕಾರ ಈ ಸಂಘಟನೆಗಳ ಒಗ್ಗಟ್ಟನ್ನು ಮುರಿಯಲು ಸಂಚು ಹೂಡುತ್ತಲೇ ಇದೆ ಎಂದಿದ್ದಾರೆ.

# ಸರಕಾರಿ ನೌಕರ ಸಮಾವೇಶ ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಫೆ.27ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ರಾಜ್ಯ ಸರಕಾರಿ ನೌಕರ ಸಮಾವೇಶದಲ್ಲಿ ರಾಜ್ಯದ ಒಟ್ಟು 4 ಲಕ್ಷ ಸರಕಾರಿ ನೌಕರರು ಹಾಗೂ ಗದಗ ಜಿಲ್ಲೆಯಿಂದ 4 ಸಾವಿರ ನೌಕರರು ಸೇರುವ ನಿರೀಕ್ಷೆಯಿದ್ದು, ಸಮಾವೇಶವನ್ನ ಯಶಸ್ವಿಗೊಳಿಸುವಂತೆ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜೀಕರ ಕರೆ ನೀಡಿದರು.

ನಗರದ ಸರಕಾರಿ ನೌಕರರ ಭವನದಲ್ಲಿ ನಡೆಸಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಸೇರಿದಂತೆ ಸಚಿವರ ಸಮ್ಮುಖದಲ್ಲಿ ಈ ಸಮಾವೇಶ ನಡೆಯಲಿದ್ದು, 7ನೇ ವೇತನ ಆಯೋಗದ ವರದಿ ಅನುಷ್ಠಾನ, ಹೊಸ ಪಿಂಚಣಿ ಯೋಜನೆ ರದ್ದತಿ-ಹಳೆಯ ಪಿಂಚಣಿ ಯೋಜನೆ ಜಾರಿ ಸೇರಿದಂತೆ ಕೆಲ ಪ್ರಮುಖ ಬೇಡಿಕೆಗಳು ಈಡೇರುವ ಸಾಧ್ಯತೆಯಿರುವ ಹಿನ್ನೆಲೆಯಲ್ಲಿ ರಾಜ್ಯದ ಸರಕಾರಿ ನೌಕರರು, ನಿಗಮ ಮಂಡಳಿ ಸೇರಿದಂತೆ ಸರಕಾರಿ ವಿವಿಧ ವೃಂದಗಳ ನೌಕರರು ಸೇರಿ ಒಟ್ಟು 4 ಲಕ್ಷ ನೌಕರರು ಭಾಗವಹಿಸಲಿದ್ದಾರೆ.

ಪ್ರತಿ ತಾಲೂಕಿನಿಂದ 2 ಬಸ್ ಸೇರಿದಂತೆ ಗದಗ ಜಿಲ್ಲೆಯಿಂದ ಒಟ್ಟು 25 ಬಸ್ ಹೊರಡಿಸಲಾಗುವದು. ರಾಜ್ಯ ಮತ್ತು ಗದಗ ಜಿಲ್ಲೆಯ ಸಮಸ್ತ ನೌಕರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಈ ಸಮಾವೇಶದಲ್ಲಿ ಭಾಗವಹಿಸುವ ಮೂಲಕ ಸರಕಾರಿ ನೌಕರರ ಸಮಾವೇಶ ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.



ಈ ಸಂದರ್ಭದಲ್ಲಿ ಸರಕಾರಿ ನೌಕರ ಸಂಘದ ಪದಾಧಿಕಾರಿಗಳು ಅಗತ್ಯ ಸಲಹೆ-ಸೂಚನೆಗಳನ್ನು ನೀಡಿದರು. ಸಂಘದ ಗೌರವಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ರಾಜ್ಯ ಪರಿಷತ್ ಸದಸ್ಯ ಡಾ. ಶರಣು ಗೋಗೇರಿ, ಕೋಶಾಧ್ಯಕ್ಷ ಸತೀಶ ಕಟ್ಟಿಮನಿ, ಪ್ರಧಾನ ಕಾರ್ಯದರ್ಶಿ ಕೆ.ಬಿ. ಕೊಣ್ಣೂರ, ಉಪಾಧ್ಯಕ್ಷರಾದ ಎಸ್.ಎನ್. ಲಿಂಗದಾಳ, ಹಿರೇಮಠ, ಸೋಮಣ್ಣವರ ಮುಂತಾದವರಿದ್ದರು.

# 'ರಾಷ್ಟ್ರಸೇವೆ' ಯುವಕರ ಅತ್ಯುತ್ತಮ ಜೀವನ ಮೌಲ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸ್ಪರ್ಧಾತ್ಮಕ ಯುಗದಲ್ಲಿ ಯುವಕರಿಗೆ ಅಧ್ಯಯನದ ಜೊತೆಗೆ ಭೌತಿಕ ಮತ್ತು ಬೌದ್ಧಿಕ ಬೆಳವಣಿಗೆ ಹಾಗೂ ಆದರ್ಶ ಜೀವನ ಮೌಲ್ಯಗಳು ತುಂಬಾ ಅವಶ್ಯವಾಗಿದ್ದು, ಈ ಬೆಳವಣಿಗೆಗೆ ಎನ್.ಎಸ್.ಎಸ್. ಸಹಕಾರಿಯಾಗಿದೆ. ವಿದ್ಯಾರ್ಥಿಗಳು ರಾಷ್ಟ್ರೀಯ ಸೇವಾ ಯೋಜನಾ ಘಟಕವು ಹಮ್ಮಿಕೊಳ್ಳುವ ಪ್ರತಿಯೊಂದು ಚಟುವಟಿಕೆಯಲ್ಲಿ ಸ್ವಯಂ ಸೇವಕರಾಗಿ ಭಾಗವಹಿಸಿ ಸೇವಾ ಮನೋಭಾವನೆ ಮೈಗೂಡಿಸಿಕೊಂಡರೆ ಬದುಕಿನ ಪ್ರತಿಯೊಂದು ಹಂತದಲ್ಲಿ ಯಶಸ್ಸು ಕಾಣಬಹುದು ಎಂದು ಅಣ್ಣಿಗೇರಿಯ ಸ.ಪ್ರ.ದ ಕಾಲೇಜಿನ ಪ್ರಾಂಶುಪಾಲ ಡಾ. ಬಿ.ಎಚ್. ಬುಳ್ಳಣ್ಣವರ ಹೇಳಿದರು.

ಅವರು ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸ.ಪ್ರ.ದ ಕಾಲೇಜಿನ ಎನ್.ಎಸ್.ಎಸ್. ಘಟಕವು ಸ್ಥಳೀಯ ಆಶ್ರಯ ಕಾಲೋನಿಯಲ್ಲಿ ಆಯೋಜಿಸಿರುವ ವಾರ್ಷಿಕ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.



ಕುರ್ತಕೋಟಿಯ ಸರ್ಕಾರಿ ಪದವಿಪೂರ್ವ ಕಾಲೇಜಿನ ಇತಿಹಾಸ ಪ್ರಾಧ್ಯಾಪಕ ಡಾ. ವಾಯ್.ಆರ್. ಬೇಲೇರಿ ಮಾತನಾಡಿ, ವಾರ್ಷಿಕ ವಿಶೇಷ ಶಿಬಿರಗಳು ವಿದ್ಯಾರ್ಥಿಗಳ ಸೇವಾ ಮನೋಭಾವನೆ, ಸಮಾಜ ಸಂಪರ್ಕ, ಸ್ಥಳೀಯ ಆಚಾರ-ವಿಚಾರಗಳು ಮತ್ತು ಸಂಪ್ರದಾಯಗಳ ಪರಿಚಯ, ನಾಯಕತ್ವ ಗುಣವನ್ನು ಬೆಳೆಸಿಕೊಳ್ಳಲು ಸಹಕಾರಿಯಾಗುತ್ತವೆ ಎಂದರು.

ಪ್ರಾಂಶುಪಾಲ ಡಾ. ಶಿವಪ್ಪ ಕುರಿ ಮಾತನಾಡಿ, ಇಂದಿನ ಯುವಕರಿಗೆ ಸೇವೆಯ ಆಯಾಮಗಳನ್ನು ಅರಿಯಲು, ಸಂವಹನ ಕೌಶಲ್ಯವನ್ನು ಬೆಳೆಸಿಕೊಳ್ಳಲು ಎನ್.ಎಸ್.ಎಸ್. ವಾರ್ಷಿಕ ಶಿಬಿರಗಳು ಪ್ರಯೋಗ ಶಾಲೆಗಳಾಗಿವೆ ಎಂದರು.

ಘಟಕದ ಸಂಯೋಜಕ ಮತ್ತು ಶಿಬಿರಾಧಿಕಾರಿ ಡಾ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಹ ಶಿಬಿರಾಧಿಕಾರಿ ಡಾ. ಪ್ರಬಲ ರೊಡ್ಡಣ್ಣವರ ಅತಿಥಿಗಳನ್ನು ಪರಿಚಯಿಸಿ ಸ್ವಾಗತಿಸಿದರು. ಅಯ್ಯಪ್ಪ ವಿಭೂತಿ ಮತ್ತು ಸಂಗಡಿಗರು ಎನ್.ಎಸ್.ಎಸ್. ಗೀತೆ ಹಾಡಿದರು. ಸಹ ಶಿಬಿರಾಧಿಕಾರಿ ಸಂಗೀತಾ ಕಲಾಲ ನಿರೂಪಿಸಿದರು. ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ಡಾ. ಲಕ್ಷ್ಮಣ ಮುಳಗುಂದ ವಂದನಾರ್ಪಣೆಗೈದರು.

## ಮನೋರಮಾ ಕಾಲೇಜು ಬಿ.ಕಾಂ ವಿದ್ಯಾರ್ಥಿಗಳ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಶೈಕ್ಷಣಿಕ ಸಾಲಿನ ಬಿ.ಕಾಂ ಕೋರ್ಸಿನ 4ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ನಗರದ ಮನೋರಮಾ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸಾಧನೆಗೈದಿದ್ದಾರೆ.

ವಿದ್ಯಾರ್ಥಿಗಳಾದ ಪವನ ಮುದಗಲ್ಲ 661 ಅಂಕಗಳೊಂದಿಗೆ ಪ್ರಥಮ, ಸುಷ್ಮಾ ಓಸೆಕರ 654 ಅಂಕಗಳೊಂದಿಗೆ ದ್ವಿತೀಯ, ಚೇತನ ಸಿದ್ದನಗೌಡರ 651 ಅಂಕಗಳೊಂದಿಗೆ ತೃತೀಯ, ಪ್ರಿಯಾ ಹಬೀಬ 641 ಅಂಕಗಳೊಂದಿಗೆ 4ನೇ ಸ್ಥಾನ, ರಾಜೇಶ್ವರಿ ಗಂಜಿ 639 ಅಂಕಗಳೊಂದಿಗೆ 5ನೇ ಸ್ಥಾನ ಪಡೆದಿದ್ದಾರೆ.

ಫೈನಾನ್ಸಿಯಲ್ ಮ್ಯಾನೇಜ್‌ಮೆಂಟ್ ವಿಷಯದಲ್ಲಿ ಶೃತಿ ಶೇಟ್ ಹಾಗೂ ಸುಷ್ಮಾ ಓಸೆಕರ 100ಕ್ಕೆ 100 ಅಂಕ ಗಳಿಸಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದು, ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಅಲ್ವಿನಾ ಡಿ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

### ಯಶಸ್ವಿಯಾದ ಜಿಲ್ಲಾಧಿಕಾರಿಗಳ ಜನತಾ ದರ್ಶನ | ಜಲ ಬವಣೆ ನೀಗಿಸಲು ಹೆಚ್ಚಿನ ಚರ್ಚೆ

# ಅರ್ಜಿಗಳಿಗೆ ನಿಯಮಾನುಸಾರ ಪರಿಹಾರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಾಲೂಕಾ ಪಂಚಾಯತ ಸಭಾಂಗಣದಲ್ಲಿ ಬುಧವಾರ ತಾಲೂಕಾಡಳಿತದಿಂದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮ ಜರುಗಿತು.

ತಹಸೀಲ್ದಾರ ವಾಸುದೇವಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹೆಚ್ ಸೇರಿದಂತೆ ಎಲ್ಲ ಇಲಾಖೆಗಳ ಅಧಿಕಾರಿಗಳ ಸಮ್ಮುಖದಲ್ಲಿ ಖುದ್ದು ಜಿಲ್ಲಾಧಿಕಾರಿಗಳೇ ಪ್ರತಿಯೊಬ್ಬರ ಅರ್ಜಿ ಪಡೆದು ಅರ್ಜಿದಾರರೊಂದಿಗೆ ಆತ್ಮೀಯವಾಗಿ ಮಾತನಾಡಿ ಅಹವಾಲು ಆಲಿಸಿದರು.

ಮುಖ್ಯವಾಗಿ ಲಕ್ಷ್ಮೇಶ್ವರ ಪಟ್ಟಣಕ್ಕೆ ಕಳೆದ ಒಂದು ತಿಂಗಳಿನಿಂದ ನದಿ ನೀರು ಸರಬರಾಜು ನಿಂತಿದ್ದು, ಸಾರ್ವಜನಿಕರು ನೀರಿಗಾಗಿ ಪರಿತಪಿಸುವಂತಾಗಿದೆ ಎಂದು ಪತ್ರಕರ್ತರು ಮತ್ತು ಸಾರ್ವಜನಿಕರು ಜಿಲ್ಲಾಧಿಕಾರಿಗಳ ಗಮನಕ್ಕೆ ತರುತ್ತಿದ್ದಂತೆ-ಯೇ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿಗಳು ತುಂಗಭದ್ರಾ ಜಲಾಯಶದ ಪ್ರಾದೇಶಿಕ ಆಯುಕ್ತರನ್ನು ಸಂಪರ್ಕಿಸಿ ಜಲಾಶಯದಿಂದ ಫೆ.7ರಂದೇ ನದಿಗೆ ನೀರು ಬಿಡಲಾಗಿದೆ. 3-4 ದಿನಗಳಲ್ಲಿ ನೀರು ಬರಲಿದೆ ಎಂಬ ಮಾಹಿತಿ ಪಡೆದರು.

ಆದರೆ ನೀರು ಹರಿದು ಬರುವ ವೇಳೆ ನದಿ ಪಾತ್ರದಲ್ಲಿನ ರೈತರು ಹಗಲೂ-ರಾತ್ರಿ ಪಂಪ್‌ಸೆಟ್‌ಗಳ ಮೂಲಕ ದೊಡ್ಡ ಪ್ರಮಾಣದಲ್ಲಿ ನೀರೆತ್ತಲಾಗುತ್ತದೆ. ಪಟ್ಟಣಕ್ಕೆ ನೀರೆತ್ತುವ ಮೇವುಂಡಿ ಜಾಕ್‌ವೆಲ್‌ನಿಂದಲೇ ರೈತರು ಪಂಪಸೆಟ್ ಮೂಲಕ ನೀರೆತ್ತುದ್ದಾರೆ.

ಅಲ್ಲದೇ ಸದ್ಯದ ಪರಿಸ್ಥಿತಿಯಲ್ಲಿ ಅಲ್ಲಿ ನೀರು ಸಂಗ್ರಹವಾಗುವ ವ್ಯವಸ್ಥೆಯಿಲ್ಲ ಎಂಬ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಕೂಡಲೇ ತಹಸೀಲ್ದಾರ, ಪುರಸಭೆ, ತಾಲೂಕಾ ಪಂಚಾಯತಿ, ಹೆಸ್ಕಾಂ ಮತ್ತು ಪೊಲೀಸರು ಸ್ಥಳಕ್ಕೆ ತೆರಳಿ ಅಲ್ಲಿರುವ ರೈತರ ಪಂಪ್‌ಸೆಟ್ ತೆರವುಗೊಳಿಸುವಂತೆ ಸೂಚಿಸಿದರು. ಈ ಕೆಲಸವನ್ನು ಹಾವೇರಿ, ರಾಣೇಬೆನ್ನೂರು, ಹರಿಹರ ಭಾಗದಲ್ಲಿಯೂ ಮಾಡುವಂತೆ ಅಲ್ಲಿನ ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿ,



ಈ ವೇಳೆ ಜಿಲ್ಲಾಧಿಕಾರಿಗಳು ಮಾತನಾಡಿ, ಸರ್ಕಾರಿ ಆಡಳಿತವು ಜನರಲ್ಲಿಗೆ ಹೋಗಿ ಅವರ ಸಮಸ್ಯೆಗೆ ಪರಿಹಾರ ಕಲ್ಪಿಸಬೇಕು ಎಂಬ ಉದ್ದೇಶ ಹೊಂದಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಜನತಾ ದರ್ಶನ ಕಾರ್ಯಕ್ರಮ ನಡೆಸಲಾಗುತ್ತದೆ. ಇಲ್ಲಿ ಸ್ವೀಕೃತವಾದ ಅರ್ಜಿಗಳಿಗೆ ಸಾಧ್ಯವಾದರೆ ಸ್ಥಳದಲ್ಲಿಯೇ ಪರಿಹಾರ, ಇಲ್ಲವೇ ಆದ್ಯತೆಯ ಮೇರೆಗೆ ಪರಿಹಾರ ಕಲ್ಪಿಸಲಾಗುವುದು. ಸ್ವೀಕೃತವಾದ ಅರ್ಜಿಗಳು ಹಾಗೂ ಮನವಿಗಳನ್ನು ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ ಐಪಿಜಿಆರ್‌ಎಸ್ ತಂತ್ರಾಂಶದಲ್ಲಿ ದಾಖಲಿಸುವುದು ಮತ್ತು ಅರ್ಜಿಗಳ ವಿಲೇವಾರಿಯನ್ನು ನಿರ್ವಹಿಸುವ ಪ್ರಕ್ರಿಯೆಯು ಜಿಲ್ಲಾಡಳಿತದಿಂದ ಅಚ್ಚುಕಟ್ಟಾಗಿ ನಡೆಯುತ್ತಿದೆ. ಸ್ವೀಕೃತವಾದ ಅರ್ಜಿಗಳನ್ನು ಜಾಗ್ರತೆಯಿಂದ ಹಾಗೂ ಸಹಾನುಭೂತಿಯಿಂದ ಪರಿಶೀಲಿಸಿ ನಿಗದಿತ ಕಾಲಾವಧಿಯೊಳಗೆ ನಿಯಮಾನುಸಾರ ಪರಿಹಾರೋಪಾಯ ಒದಗಿಸಲಾಗುವುದು ಎಂದು ತಿಳಿಸಿದರು.

ಗದಗ ಜಿಲ್ಲೆಯ 4 ತಾಲೂಕುಗಳಿಗೆ ತುಂಗಭದ್ರಾ ನದಿ ನೀರೇ ಆಸರೆಯಾಗಿದ್ದು, ಸಹಕರಿಸುವಂತೆ ಕೋರಿದರು. ಈ ವೇಳೆ ಮುಖ್ಯಾಧಿಕಾರಿಗಳಿಗೆ ಪಟ್ಟಣ ವ್ಯಾಪ್ತಿಯ ಎಲ್ಲ ಬೋರ್‌ವೆಲ್ ಸರಿಪಡಿಸಿ ನೀರಿನ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಿ ಎಂದು ಸೂಚಿಸಿದರು.

ಬಳಿಕ ಪಟ್ಟಣದಲ್ಲಿನ ಆಶ್ರಯ ನಿವೇಶನ ಫಲಾನುಭವಿಗಳ ಆಯ್ಕೆಯಲ್ಲಾದ ಅನ್ಯಾಯ ಸರಿಪಡಿಸಬೇಕು, ವಿವಿಧ ಯೋಜನೆಗಳಡಿ ರೈತರಿಗೆ ಲಭಿಸಿದ ಸಹಾಯಧನ ಅವರ ಸಾಲದ ಖಾತೆಗೆ ಜಮೆ ಮಾಡಿಕೊಳ್ಳುತ್ತಿರುವ ಬ್ಯಾಂಕ್ ಅಧಿಕಾರಿಗಳ ಕ್ರಮಕ್ಕೆ ಬ್ರೇಕ್ ಹಾಕಬೇಕು, ಗೃಹಲಕ್ಷ್ಮೀ, ಶಕ್ತಿಯೋಜನೆ, ಪಿಂಚಣಿಯಲ್ಲಾಗುತ್ತಿರುವ ಸಮಸ್ಯೆ, ತಾಲೂಕಿನಲ್ಲಿ ಹದಗೆಟ್ಟ ರಸ್ತೆಗಳು, ಹಳ್ಳ ಹಿಡಿದ ಯುಜಿಡಿ ಯೋಜನೆ, ವಿದ್ಯುತ್, ತಾಲೂಕು ಕೇಂದ್ರವಾದರೂ ಶಿರಹಟ್ಟಿಗೆ ಅಲೆಯುವುದು ತಪ್ಪದಿರುವ ಬಗ್ಗೆ, ಶಿಗ್ಲಿ ಗ್ರಾಮದಲ್ಲಿ ನೇಕಾರರು ಅನುಭವಿಸುತ್ತಿರುವ ಸಮಸ್ಯೆ, ನೀರಾವರಿ ರೈತರು ಅಂತರ್ಜಲಮಟ್ಟ ಕುಸಿತದ ಜತೆಗೆ ಕಾಡುಪ್ರಾಣಿಗಳಿಂದಾಗುತ್ತಿರುವ ಹಾನಿ, ಸೋಮೇಶ್ವರ ಸಹಕಾರಿ ನೂಲಿನ ಗಿರಣಿಯಿಂದ ತಮಗೆ ಅನ್ಯಾಯವಾಗಿದೆ ಎಂಬ ರೈತ ಕುಟುಂಬದ ಮನವಿ ಸೇರಿ 50ಕ್ಕೂ ಹೆಚ್ಚು ಸಮಸ್ಯೆಗಳನ್ನು ಹೊತ್ತು ಅರ್ಜಿಯೊಂದಿಗೆ ಬಂದ ರೈತರು, ವೃದ್ಧರು, ಮಹಿಳೆಯರು, ಸಂಘಟಕರು ಸಾರ್ವಜನಿಕರಿಗೆ ಸ್ಥಳದಲ್ಲಿಯೇ ಪರಿಹಾರ ಸೂಚಿಸಿದರು.

ಈ ವೇಳೆ ಕೃಷಿ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಾರಿಗೆ, ಜಿ.ಪಂ, ಪಿಡಬ್ಲೂಡಿ ಸೇರಿ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.

## ಐಡಿಎ-ರೋಟರಿಯಿಂದ ದಂತ ತಪಾಸಣಾ ಶಿಬಿರ




■ ವಿಜಯಸಾಕ್ಷಿ ಸುದ್ದಿ, ಗದಗ

ಇಂಡಿಯನ್ ಡೆಂಟಲ್ ಅಸೋಸಿಯೇಶನ್ ಧಾರವಾಡ, ರೋಟರಿ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಕೆಎಲ್‌ಇ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯವು ನಾಗಾವಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಎನ್‌ಎಸ್‌ಎಸ್ ವಿಶೇಶ ಶಿಬಿರದಲ್ಲಿ ದಂತ ತಪಾಸಣ ಶಿಬಿರವನ್ನು ಏರ್ಪಡಿಸಲಾಗಿತ್ತು.

ಶಿಬಿರವನ್ನು ರೋಟರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ರೊ. ಶ್ರೀಧರ ಸುಲ್ತಾನಪೂರ ಉದ್ಘಾಟಿಸಿದರು. ಐಡಿಎ ಸದಸ್ಯ ಡಾ. ಆರ್.ಬಿ. ಉಪ್ಪಿನ ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಪ್ರತಿಯೊಬ್ಬರೂ ನಿತ್ಯ ಎರಡು ಬಾರಿ ತಮ್ಮ ಹಲ್ಲುಗಳನ್ನು ಸ್ವಚ್ಛಗೊಳಿಸಬೇಕು. ತಂಬಾಕು ಜಗಿಯುವುದರಿಂದ ಹಲ್ಲುಗಳು ಹಾಳಾಗುತ್ತವೆ ಮತ್ತು ತಂಬಾಕು ಬಾಯಿಯ ಕ್ಯಾನ್ಸರ್‌ಗೆ ಕಾರಣವಾಗಬಹುದು. ಆದ್ದರಿಂದ ತಂಬಾಕು ಜಗಿಯುವುದನ್ನು ಸಂಪೂರ್ಣವಾಗಿ ತ್ಯಜಿಸಬೇಕೆಂದು ಸಲಹೆ ನೀಡಿದರು.

ಎನ್.ಎಸ್.ಎಸ್ ವಿಶೇಶ ಘಟಕದ ಸಂಯೋಜಕ ವಿಠ್ಠಲ ಕೋಳಿಯವರು ಸರ್ವರನ್ನು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಕಾರ್ಯದರ್ಶಿಗಳಾದ ರೊ. ವೀಣಾ ತಿರ್ಲಾಪೂರ, ರೊ. ಸಂತೋಷ ಅಕ್ಕಿ, ರೊ. ಶಿವಾಚಾರ್ಯ ಹೊಸಳ್ಳಿಮಠ, ಡಾ. ಕಮಲಾಕ್ಷಿ ಅಂಗಡಿ, ರೊ. ಬಾಲಕೃಷ್ಣ ಕಾಮತ ಮುಂತಾದವರು ಉಪಸ್ಥಿತರಿದ್ದರು.

### ಜನ್ಮದಿನದ ಪ್ರಯುಕ್ತ ಮಂಜುನಾಥ ಬಸಪ್ಪ ಅಬ್ಬಿಗೇರಿಯವರಿಗೆ ಸನ್ಮಾನ

# ಪತ್ರಿಕಾರಂಗ ಜನರ ನಿಜವಾದ ಧ್ವನಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಾನು ಹತ್ತು ಹಲವು ಉದ್ಯಮಗಳನ್ನು ಮಾಡಿದ್ದು, ಪತ್ರಿಕೋದ್ಯಮ ಇತರೆಲ್ಲಕ್ಕಿಂತ ಭಿನ್ನವಾಗಿದೆ. ಜನಸಾಮಾನ್ಯರ ಪರವಾಗಿ ಧ್ವನಿ ಎತ್ತುವ ಮೂಲಕ ಪತ್ರಿಕೆಗಳು ಶಾಶ್ವತವಾಗಿ ಆಡಳಿತ ಪಕ್ಷಕ್ಕೆ ನಿಜವಾಗಿ ವಿರೋಧ ಪಕ್ಷವಾಗಿ ಕೆಲಸ ಮಾಡುತ್ತವೆ ಎಂದು ಕಿತ್ತೂರ ಕರ್ನಾಟಕ ದಿನಪತ್ರಿಕೆ ಸಂಪಾದಕ ಮಂಜುನಾಥ ಬಸಪ್ಪ ಅಬ್ಬಿಗೇರಿ ಹೇಳಿದರು.

ಅವರು ಇಲ್ಲಿನ ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಮಂಜುನಾಥ ಬಸಪ್ಪ ಅಬ್ಬಿಗೇರಿ ಅಭಿಮಾನಿ ಬಳಗ ತಮ್ಮ 70ನೇ ಜನ್ಮದಿನೋತ್ಸವದ ನಿಮಿತ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಜಿಲ್ಲಾ ಪತ್ರಿಕೆಗಳು ಆಯಾ ತಾಲೂಕಿನ ಎಲ್ಲ ಸುದ್ದಿಗಳನ್ನು ಪ್ರಕಟಿಸಿದರೆ ಕಿತ್ತೂರ ಕರ್ನಾಟಕದಂತಹ ಪ್ರಾದೇಶಿಕ ಪತ್ರಿಕೆಗಳು ಎಂಟು ಜಿಲ್ಲೆಗಳ ವ್ಯಾಪ್ತಿಯಲ್ಲಿನ ಎಲ್ಲ ತಾಲ್ಲೂಕು, ಗ್ರಾಮೀಣ ಸುದ್ದಿಗಳನ್ನು ಒಂದೇ ಆವೃತ್ತಿಯಲ್ಲಿ ಪ್ರಕಟಿಸುತ್ತಿದೆ. ಅಷ್ಟೇ ಅಲ್ಲ, ರಾಜ್ಯದಲ್ಲಿ 750 ಜಿಲ್ಲಾ ಹಾಗೂ ಪ್ರಾದೇಶಿಕ ಪತ್ರಿಕೆಗಳಿದ್ದು, ಸರ್ಕಾರದ ಎಲ್ಲ ಸುದ್ದಿ, ಯೋಜನೆಗಳಿಗೆ ಹೆಚ್ಚು ಪ್ರಚಾರ ಕೊಡುವ ವೇದಿಕೆಯಾಗಿವೆ



ಜನ್ಮದಿನಾಚರಣೆ ಎಂಬುದು ಕೇವಲ ನೆಪಮಾತ್ರ. ಇದರ ನೆಪದಲ್ಲಿ ಬಾಲ್ಯಸ್ನೇಹಿತರು, ಅಭಿಮಾನಿಗಳು, ಹಿತೈಷಿಗಳು, ಸಂಘ-ಸಂಸ್ಥೆಗಳ ಮುಖ್ಯಸ್ಥರನ್ನು ಒಂದೆಡೆ ಸೇರಿಸುವಲ್ಲಿ ಈ ಕಾರ್ಯಕ್ರಮ ವೇದಿಕೆಯಾಯಿತು. ನನಗೆ ಗೌರವಿಸಿ, ಹಾರೈಸಿದ ಹಾಗೂ ಮೊಬೈಲ್ ಕರೆಗಳ ಮೂಲಕವೂ ಶುಭಕೋರಿದ ಎಲ್ಲರ ಅಭಿಮಾನಕ್ಕೆ ನಾನು ಚಿರಋಣಿ ಎಂದು ಮಂಜುನಾಥ ಬಸಪ್ಪ ಅಬ್ಬಿಗೇರಿ ಹೇಳಿದರು.

ಎಂದ ಅವರು, ಪತ್ರಿಕೆಗಳಿಗೆ ಸರ್ಕಾರದಿಂದ ಸಿಗುವ ಜಾಹೀರಾತು ಸೇರಿ ಸೌಲಭ್ಯ ಪಡೆಯಲು ದಿನಪತ್ರಿಕೆಗಳ ಸಂಪಾದಕರ ಸಂಘ ಸ್ಥಾಪಿಸಲಾಗಿದೆ. ಸ್ವತಃ ವಾರ್ತಾ ಇಲಾಖೆಯಲ್ಲೇ ಅಧಿಕಾರಿಯಾಗಿ ನಿವೃತ್ತಿಯಾಗಿರುವ ಹಾಗೂ ಸದ್ಯಕ್ಕೆ ಸ್ವಂತ ಪತ್ರಿಕೆ ಹೊಂದಿರುವ ತಿಪ್ಪೇಸ್ವಾಮಿ ಅವರನ್ನೇ ರಾಜ್ಯಾಧ್ಯಕ್ಷರನ್ನಾಗಿ ಮಾಡಿದೆವು. ಅವರೂ ಕೂಡ ಅಷ್ಟೇ ಕ್ರಿಯಾಶೀಲರಾಗಿ ಕಾರ್ಯ ಮಾಡುತ್ತಿದ್ದಾರೆ. ಆಡಳಿತ ಪಕ್ಷಕ್ಕೆ ಜನರ ಧ್ವನಿ ತಲುಪಿಸಲು ಯತ್ನ ಹಾಗೂ ಅರ್ಹರಿಗೆ ಯೋಜನೆ ತಲುಪಿಸಲು ಪತ್ರಿಕೆಗಳು ಇವೆ ಎಂದರು.

ಈ ಸಂದರ್ಭದಲ್ಲಿ ಅವಳಿ ನಗರದ ವಿವಿಧ ಸಂಘ-ಸಂಸ್ಥೆಗಳ ಮುಖ್ಯಸ್ಥರು, ಎಲ್ಲ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಸ್ನೇಹಿತರು, ಹಿತೈಷಿಗಳು, ವಕೀಲರು ಆಗಮಿಸಿ ಮಂಜುನಾಥ ಬಸಪ್ಪ ಅಬ್ಬಿಗೇರಿ ಅವರನ್ನು ಸನ್ಮಾನಿಸಿ, ಗೌರವಿಸಿದರು.

## ಜೆಇಇ ಪರೀಕ್ಷೆಯಲ್ಲಿ ಬಿಸಿಎನ್ ಸಿರಿ ವಿದ್ಯಾರ್ಥಿಗಳ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ಸಿರಿ ವಿಜ್ಞಾನ, ವಾಣಿಜ್ಯ ಪದವಿಪೂರ್ವ ಕಾಲೇಜಿನ 2023-24ನೇ ಸಾಲಿನ ವಿದ್ಯಾರ್ಥಿಗಳು ಜೆಇಇ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದು, ಬುಧವಾರ ಕಾಲೇಜಿನಲ್ಲಿ ಸಾಧಕ ವಿದ್ಯಾರ್ಥಿಗಳಾದ ಶ್ರೀದೇವಿ ಜೋಳದ, ಸುಪ್ರಿಯಾ ನಾಯಕ್ ಅವರನ್ನು ಸಂಸ್ಥೆಯ ನಿರ್ದೇಶಕ ಲೊಹಿತ್ ನೆಲವಿಗಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸಾಧನೆಯ ಹಸಿವು ಹೊಂದಿರಬೇಕು. ವಿದ್ಯಾರ್ಥಿ ಜೀವನದಲ್ಲಿ ಕಠಿಣ ಪರಿಶ್ರಮ, ಏಕಾಗ್ರತೆ, ಸತತ ಅಭ್ಯಾಸ, ಪ್ರಾಮಾಣಿಕತೆ ಇವುಗಳನ್ನು ಇಟ್ಟುಕೊಂಡು ಮುಂದುವರೆದರೆ ಸಾಧನೆಯ ಹಾದಿ ಸುಲಭವಾಗುತ್ತದೆ. ಈ ನಿಟ್ಟಿನಲ್ಲಿ ಬಿಸಿಎನ್ ಸಿರಿ ಕಾಲೇಜಿನ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಈ ವರ್ಷ ಪ್ರಥಮ ಬಾರಿಗೆ ಜೆಇಇ ಪರೀಕ್ಷೆಯನ್ನು ಎದುರಿಸಿ ಉತ್ತಮ ಸಾಧನೆ ಮಾಡಿದ್ದು ಸಂಸ್ಥೆಯ ಕೀರ್ತಿ ಹೆಚ್ಚಿಸಿದೆ.

ಕಾಲೇಜಿನಲ್ಲಿ ಕಳೆದೆರಡು ವರ್ಷಗಳಿಂದ ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಉತ್ತಮ ಶಿಕ್ಷಣ ದೊರೆಯುತ್ತಿದ್ದು, ಇದೀಗ ಜೆಇಇ ಪರೀಕ್ಷೆ ಎದುರಿಸಿದ ಮಕ್ಕಳು ಉತ್ತಮ ಅಂಕಗಳನ್ನು ಗಳಿಸಿರುವದು ಹೆಮ್ಮೆಯ ಸಂಗತಿಯಾಗಿದೆ. ಇನ್ನೂ ಹೆಚ್ಚಿನ ಪರಿಶ್ರಮದಿಂದ ಮುಂದಿನ ಗುರಿಯನ್ನು ತಲುಪುವಂತಾಗಲಿ ಎಂದು ಹಾರೈಸಿದರು.

ಸಾಧಕ ವಿದ್ಯಾರ್ಥಿಗಳು ಅನಿಸಿಕೆ ಹಂಚಿಕೊಂಡರು. ಈ ಸಂದರ್ಭದಲ್ಲಿ ದಿಗಂಬರ ಪೂಜಾರ, ಉಪನ್ಯಾಸಕರಾದ ಗಿರೀಶ ರಡ್ಡಿ, ಬಸವರಾಜ, ವೃಷಭ, ಮಂಜುನಾಥ ಬಂಡಿವಾಡ, ನಾಗರತ್ನಾ, ಬಾಷಾಸಾಬ, ನಾಜ್ ಹೆಸರೂರ, ಖುಷಾ ಅರಳಿ, ವಿದ್ಯಾ, ಸುಧಾರಾಣಿ, ರಮೇಶ, ಅಭಿಲಾಷಾ, ಮೇಷಾ, ಶಶಾಂಕ ಹಾಗೂ ಸಿಬ್ಬಂದಿವರ್ಗದವರಿದ್ದರು.

## ನಾಳೆ ಶ್ರೀ ಸವಿತಾ ಮಹರ್ಷಿ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಶ್ರೀ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಫೆಬ್ರವರಿ 16 ರಂದು ಸಂಜೆ 4.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಶ್ರೀಮತಿ ಸುನಂದಾ ಬಾಕಳೆ ಆಗಮಿಸುವರು.

ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಕೃಷ್ಣಾ ಹಡಪದ ವಿಶೇಷ ಆಮಂತ್ರಿತರಾಗಿ ಆಗಮಿಸುವರು. ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವೀರಯ್ಯ ಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.



ಗದಗ ತಾಲೂಕಿನ ಚಿಕೇನಕೊಪ್ಪದ ಚನ್ನವೀರ ಶರಣರ ಮಠದಲ್ಲಿ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗುತ್ತಿರುವ ಪ್ರವಚನ ಕಾರ್ಯಕ್ರಮದಲ್ಲಿ ನಿವೃತ್ತ ಬೆಳಗಾವಿ ಪ್ರಾದೇಶಿಕ ಆಯುಕ್ತ ಎಂ.ಜಿ. ಹಿರೇಮಠ ಅವರನ್ನು ಶ್ರೀ ಶಿವಶಾಂತವೀರ ಶರಣರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಗ್ರಾಮಸ್ಥರು, ಸದ್ಭಕ್ತರು ಉಪಸ್ಥಿತರಿದ್ದರು.

## ಗೋಕಾಕ್, ಚಿಕ್ಕೋಡಿ ಹೊಸ ಜಿಲ್ಲೆಗಳು; ಫೆ.16ರಂದು ಸಿಎಂ ಸಿದ್ದರಾಮಯ್ಯ ಘೋಷಣೆ ಸಾಧ್ಯತೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ಅತಿದೊಡ್ಡ ಜಿಲೆಯ ಬೆಳಗಾವಿ ಭಾಗದ ವಿವಿಧ ಸಂಘಟನೆಗಳು ಮತ್ತು ಜನರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಜಿಲ್ಲೆಯನ್ನು ಮೂರು ಜಿಲ್ಲೆಗಳಾಗಿ ವಿಂಗಡಿಸುವ ಸಾಧ್ಯತೆಗಳಿವೆ. ಮೂಲಗಳ ಪ್ರಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ (ಫೆ.16) ಬಜೆಟ್ ಮಂಡಿಸಲಿದ್ದು, ಈ ವೇಳೆ ಚಿಕ್ಕೋಡಿ ಮತ್ತು ಗೋಕಾಕವನ್ನು ಹೊಸ ಜಿಲ್ಲೆಗಳೆಂದು ಘೋಷಿಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

## ರಾಮಗಿರಿ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಕಾರ್ಯಕ್ರಮ




■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ರಾಮಗಿರಿ ಗ್ರಾಮ ಪಂಚಾಯತನಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಸ್ವಾಗತಿಸಿ, ಗ್ರಾಮ ಪಂಚಾಯತ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಎಲ್ಲಾ ಸದಸ್ಯರು, ಸಾರ್ವಜನಿಕರು ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka